ಕನ್ನಡ ದಿನಪತ್ರಿಕೆ

07 ಏಪ್ರಿಲ್ । ರವಿವಾರ
07 APRIL 2024

# ಬೆಳಗಾವಿ ವರದಿ

ಪ್ರಧಾನ ಸಂಪಾದಕ : ಸತೀಶ ಬ ಗುಡಗೆನಟ್ಟಿ

BELAGAVI VARADI KANNADA DAILY NEWS PAPER

ಗಡಿ ಜಿಲ್ಲೆಯ ಧ್ವನಿ...

₹4 | ಸಂಪುಟ – 5 ಸಂಚಿಕೆ – 43 ಪುಟ – 4 | RNI . KARKAN/2020/79084 | ADVRT EMAIL. BELAGAVIVARADIEDITOR@GMAIL.COM | NEWSBELAGAVI@GMAIL.COM | 9900332089 | REG.NO G-2/PMG/KA/NK/BM/139/2024-26




## ಆನೇಕಲ್: ನಿಯಂತ್ರಣ ತಪ್ಪಿ ನೆಲಕ್ಕೆ ಉರುಳಿದ 120 ಅಡಿ ಎತ್ತರದ ತೇರು

ಆನೇಕಲ್: 120 ಅಡಿ ಉದ್ದದ ತೇರು ನಿಯಂತ್ರಣ ಕಳೆದುಕೊಂಡು ನೆಲಕ್ಕೆ ಉರುಳಿ ಬಿದ್ದಿರುವ ಘಟನೆ ಆನೇಕಲ್ ನ ಹೀಲಲಿಗೆ ಗ್ರಾಮದಲ್ಲಿ ನಡೆದಿದೆ.

ಹುಸ್ಕೂರು ಮದ್ದೂರಮ್ಮ ಜಾತ್ರೆಯ ತೇರು ಇದಾಗಿದ್ದು, ಹಲವು ಜಾಗಗಳಿಂದ ಹುಸ್ಕೂರಿನ ಮದ್ದೂರಮ್ಮ ಜಾತ್ರೆಗೆ ತೇರು ಬರುವುದು ವಾಡಿಕೆಯಗಿದೆ. ಹೀಲಲಿಗೆ ಗ್ರಾಮದಿಂದ ಈ ತೇರು ಹುಸ್ಕೂರಿಗೆ ಬರುತ್ತಿತ್ತು. ಕಮ್ಮಸಂದ್ರದ ಹೈಪರ್ ಮಾರ್ಕೆಟ್ ತಿರುವಿನಲ್ಲಿ ಈ ತೇರು ಉರುಳಿ ಬಿದ್ದಿದೆ.

ಎತ್ತುಗಳು ಮತ್ತು ಟ್ರಾಕ್ಟರ್‌ಗಳ ನೆರವಿನಿಂದ ತೇರನ್ನು ಎಳೆದುತರಲಾಗುತ್ತಿತ್ತು. ಘಟನೆಯಲ್ಲಿ ಯಾವುದೇ ಅನಾಹುತ ಸಂಭವಿಸಿಲ್ಲ.

## ಮೋದಿ ಫೋಟೊ ಬಳಕೆ; ಈಶ್ವರಪ್ಪಗೆ ಅಧಿಕಾರವಿಲ್ಲ: ಆರ್. ಅಶೋಕ



ಬೆಂಗಳೂರು: 'ಚುನಾವಣಾ ಪ್ರಚಾರದಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಭಾವಚಿತ್ರವನ್ನು ಬಳಸುವ ಅಧಿಕಾರ ಕೆ.ಎಸ್. ಈಶ್ವರಪ್ಪ ಅವರಿಗೆ ಇಲ್ಲ' ಎಂದು ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್. ಅಶೋಕ ಹೇಳಿದರು.

ಮೋದಿ ಭಾವಚಿತ್ರ ಬಳಕೆಗೆ ಕಾನೂನು ತೊಡಕು ಉಂಟಾಗದಂತೆ ತಡೆಯಲು ಈಶ್ವರಪ್ಪ ನ್ಯಾಯಾಲಯದಲ್ಲಿ ಕೇವಿಯಟ್ ಅರ್ಜಿ ಸಲ್ಲಿಸಿರುವ ಕುರಿತು ಶನಿವಾರ ಪತ್ರಿಕಾಗೋಷ್ಠಿಯಲ್ಲಿ ಪ್ರತಿಕ್ರಿಯಿಸಿದ ಅವರು, 'ಚುನಾವಣಾ ಪ್ರಚಾರದಲ್ಲಿ ಮೋದಿಯವರ ಭಾವಚಿತ್ರ ಬಳಸುವ ಅಧಿಕಾರ ಇರುವುದು ಬಿಜೆಪಿಗೆ ಮಾತ್ರ' ಎಂದರು.

'ಅವರ ಮನೆಯಲ್ಲಿ ಮದುವೆ ಅಥವಾ ಇತರ ಕಾರ್ಯಕ್ರಮ ಇದ್ದರೆ ಮೋದಿಯವರ ಭಾವಚಿತ್ರ ಬಳಸಬಹುದು. ಆದರೆ, ರಾಜಕೀಯ ಉದ್ದೇಶಕ್ಕೆ ಬಳಸಲು ಅವಕಾಶವಿಲ್ಲ. ಆ ರೀತಿ ಮಾಡಿದರೆ ನಮ್ಮ ಕಾನೂನು ಘಟಕದ ಸದಸ್ಯರು ಸೂಕ್ತ ಕ್ರಮ ಕೈಗೊಳ್ಳುತ್ತಾರೆ' ಎಂದು ಹೇಳಿದರು.

## ನಾಮಪತ್ರ ಸಲ್ಲಿಸಲು 'ಕಾಲ' ನೋಡಲ್ಲ: ಸಚಿವ ಸತೀಶ ಜಾರಕಿಹೊಳಿ



ಬೆಳಗಾವಿ: 'ನಾಮಪತ್ರ ಸಲ್ಲಿಸುವಾಗ ಮೌಢ್ಯ ಅನುಸರಿಸಲ್ಲ. ಒಳ್ಳೆಯ ಕಾಲ, ಕೆಟ್ಟ ಕಾಲ ಎಂಬುದು ಇಲ್ಲ. ನಮ್ಮ ಎಲ್ಲ ಶಾಸಕರು ಲಭ್ಯವಿದ್ದ ದಿನ ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿ ಮಗಳು ಪ್ರಿಯಾಂಕಾ ನಾಮಪತ್ರ ಸಲ್ಲಿಸುವರು' ಎಂದು ಲೋಕೋಪಯೋಗಿ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ನಗರದಲ್ಲಿ ಶನಿವಾರ ಸುದ್ದಿಗಾರರ ಜೊತೆ ಮಾತನಾಡಿದ ಅವರು, 'ನಾವು ಒಳ್ಳೆಯದು ಮಾಡಿದರೆ ಒಳ್ಳೆಯದಾಗುತ್ತದೆ. ಕೆಟ್ಟದ್ದು ಮಾಡಿದರೆ ಕೆಟ್ಟದ್ದಾಗುತ್ತದೆ. ಕಾಲದ ಮೇಲೆ ಯಾವುದೂ ಅವಲಂಬಿತವಲ್ಲ. ಬೇರೆಡೆ ಅಭ್ಯರ್ಥಿಗಳು ನಾಮಪತ್ರ ಸಲ್ಲಿಸುವಾಗ ನಾನು ಹೋಗಬೇಕು. ಪ್ರಿಯಾಂಕಾ ನಾಮಪತ್ರ ಸಲ್ಲಿಸುವಾಗ ಸಮಯ ಹೊಂದಿಸಿಕೊಳ್ಳುವೆ' ಎಂದರು.

'ಚಿಕ್ಕೋಡಿಯಲ್ಲಿ ಪ್ರಿಯಾಂಕಾ ವಿರುದ್ಧ ಮೋದಿ ಎಂಬ ರೀತಿಯ ಸ್ಪರ್ಧೆ ಇಲ್ಲ. ಅಲ್ಲಿ ಮೋದಿ ಪಾತ್ರ ಇಲ್ಲವೇ ಇಲ್ಲ. ಏನಿದ್ದರೂ ಜೊಲ್ಲೆ ವಿರುದ್ಧ ಪ್ರಿಯಾಂಕಾ ಸ್ಪರ್ಧೆ. ಅಭಿವೃದ್ಧಿಯ ಮೇಲೆ ಚುನಾವಣೆ ನಡೆಯಲಿದೆ' ಎಂದರು.

## ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ವ್ಯಕ್ತಿಗೆ 21 ವರ್ಷ ಸೆರೆವಾಸ



ಮಂಡ್ಯ: ಅಪ್ರಾಪ್ತ ಬಾಲಕಿಂ–ಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪಿಗೆ 21 ವರ್ಷ ಕಠಿಣ ಕಾರಾಗೃಹ ಶಿಕ್ಷೆ ಹಾಗೂ1.16 ಲಕ್ಷ ದಂಡ ವಿಧಿಸಿ ಅಧಿಕ ಸತ್ರ ಮತ್ತು ತ್ವರಿತಗತಿ 2ನೇ ನ್ಯಾಯಾಲಯದ ವಿಶೇಷ ನ್ಯಾಯಾಧೀಶೆ ನಾಗಜ್ಯೋತಿ. ಕೆ.ಎ. ತೀರ್ಪು ನೀಡಿದ್ದಾರೆ.

ತಮಿಳುನಾಡು ಮೂಲದ ಅಣ್ಣಾಮಲೈ ಅವರ ಮಗ ವೆಂಕಟೇಶ್ ಜೈಲು ಶಿಕ್ಷೆಗೆ ಗುರಿಯಾಗಿದ್ದಾನೆ. ಈತ ಪೀಣ್ಯದ ಎರಡನೇ ಹಂತದಲ್ಲಿ ವಾಸವಾಗಿದ್ದ, 2020ರಲ್ಲಿ 14 ವರ್ಷದ ಅಪ್ರಾಪ್ತ ವಯಸ್ಸಿನ ಬಾಲಕಿ ಕೆ.ಆರ್.ಪೇಟೆ ತಾಲೂಕು, ಕೊಡಗಹಳ್ಳಿ ಗ್ರಾಮಕ್ಕೆ ಬೆಂಗಳೂರಿನಿಂದ ಸಾರಿಗೆ ಬಸ್ನಲ್ಲಿ ತೆರಳುತ್ತಿದ್ದಳು. ಸಹ ಪ್ರಯಾಣಿಕ ಆರೋಪಿ ವೆಂಕಟೇಶ್ ಪರಿಚಯ ಮಾಡಿಕೊಂಡಿದ್ದಾನೆ ಎನ್ನಲಾಗಿದೆ.

ಕೆಆರ್ ಪೇಟೆ ತಾಲೂಕಿನ ಬದಲು ನಾಗಮಂಗಲ ಪಟ್ಟಣದಲ್ಲಿ ವೆಂಕಟೇಶ್ ಹಾಗೂ ಬಾಲಕಿ ಬಸ್ ನಿಂದ ಇಳಿದಿದ್ದರು.

ಅಲ್ಲಿಂದ ಯುವತಿಯನ್ನು ಬಸ್ಸಿನಲ್ಲಿ ಬೆಂಗಳೂ–ರಿಗೆ ಕರೆದುಕೊಂಡು ಹೋಗಿ ತಮಿಳುನಾಡಿನ ಕೊಯಮತ್ತೂರಿನ ಧನಲಕ್ಷ್ಮಿ ನಗರಕ್ಕೆ ಕರೆದುಕೊಂಡು ಹೋಗಿದ್ದ.

# ಮೃಣಾಲ ಮತ್ತು ಪ್ರಿಯಾಂಕಾ ಸಿದ್ದರಾಮಯ್ಯನವರ ಗ್ಯಾರಂಟಿ ಅಭ್ಯರ್ಥಿಗಳು: ಲಕ್ಷ್ಮಿ ಹೆಬ್ಬಾಳ್ಕರ್

ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಮೃಣಾಲ ಹೆಬ್ಬಾಳಕರ್ ಮತ್ತು ಚಿಕ್ಕೋಡಿ ಲೋಕಸಭಾ ಅಭ್ಯರ್ಥಿ ಪ್ರಿಯಾಂಕಾ ಜಾರಕಿಹೊಳಿ ಸಿದ್ದರಾಮಯ್ಯ ಅವರ ಗ್ಯಾರಂಟಿ ಅಭ್ಯರ್ಥಿಗಳು, ಇಬ್ಬರೂ ಗೆದ್ದೆ ಗೆಲ್ಲುತ್ತಾರೆ ಎಂದು ಮಹಿಳಾ ಮತ್ತು ಮಕ್ಕಳ ಅಬಿವೃದ್ದಿ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದ್ದಾರೆ.

ಅರಬಾವಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಬೆಳಗಾವಿ ಹಾಗೂ ಚಿಕ್ಕೋಡಿ ಲೋಕಸಭಾ ವ್ಯಾಪ್ತಿಯಲ್ಲಿ ಜನರಿಂದ ಅಭೂತಪೂರ್ವ ಬೆಂಬಲ ಸಿಗುತ್ತಿದೆ. ಯಾವುದೇ ಊರಿಗೆ ಅಥವಾ ಒಂದು ಗಲ್ಲಿಗೆ ಹೋದರೂ ಜನ ಉತ್ಸಾಹದಿಂದ ಬೆಂಬಲ ನೀಡುತ್ತಿದ್ದಾರೆ. ಈ ಬಾರಿ ಬರಗಾಲ ಇದೆ, ಕೋವಿಡ್ ನಿಂದ ಜನ ತತ್ತರಿಸಿದ್ದಾರೆ,

ಬೆಲೆ ಏರಿಕೆಯಿಂದ ಜನರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಇಂತಹ ವಿಷಮ ಪರಿಸ್ಥಿಯಲ್ಲಿ ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳು ಜನರ ಕೈ ಹಿಡಿದಿವೆ. ಕಾಂಗ್ರೆಸ್ ಸರ್ಕಾರದ ಆಡಳಿತದಿಂದ ಜನ ಸಮಾಧಾನದಿಂದ ಇದ್ದಾರೆ ಎಂದು ತಿಳಿಸಿದರು.

18 ವರ್ಷದ ಯುವಕ ಗನ್ ಹಿಡಿದು ಗಡಿ ಕಾಯಲು ಸಮಥ–ರ್ನಾಗಿರುತ್ತಾನೆ. ದೇಶದ ಭವಿಷ್ಯ ಕಟ್ಟಲು 18 ವರ್ಷಕ್ಕೆ ಮತದಾನದ ಹಕ್ಕು ನೀಡುತ್ತೇವೆ. ಹಾಗೆ ಮೃಣಾಲ್ ಗೆ ಈಗ 30 ವರ್ಷ, ಇನ್ನೂ ಯುವಕ. ಜಗದೀಶ್ ಶೆಟ್ಟರ್ ಅವರು 32 ನೇ ವಯಸ್ಸಿಗೆ ಎಂಎಲ್ಎ ಆಗಿದ್ದವರು, ಅಂದು ಯುವಕರಿಗೆ ಜನರು ಬೆಂಬಲ ನೀಡದಿದ್ದರೆ ಜಗದೀಶ್ ಶೆಟ್ಟರ್ ಅವರು ಸಿಎಂ ಆಗುತ್ತಿರಲಿಲ್ಲ. ಹಾಗೆ ಈಗ ಬೆಳಗಾವಿ ಜಿಲ್ಲೆಯ ಜನರು ಜಿಲ್ಲೆಯ ಇಬ್ಬರು ಯುವಕರಿಗೂ ಆಶೀರ್ವಾದ ಮಾಡುತ್ತಾರೆ ಎಂದರು.

2013 ರಲ್ಲಿ ವಿಧಾನ ಸಭೆ ಚುನಾವಣೆ ಸ್ಪರ್ಧೆ ಮಾಡಿದ್ದೇನೆ. 2014 ರಲ್ಲಿ ಲೋಕಸಭಾ ಚುನಾವಣೆ ಸ್ಪರ್ಧೆ ಮಾಡಿದ್ದೇನೆ.

ಜಿಲ್ಲೆಯ ಜನರ ಕಷ್ಟ, ಸುಖ ಕಣ್ಣಾರೆ ನೋಡಿದ್ದೇನೆ. ಈ ಚುನಾವಣೆ



ನನಗೆ ಹೊಸದಾಗಿ ಅನಿಸುತ್ತಿಲ್ಲ. ಕಾರ್ಯಕರ್ತರು, ಮುಖಂಡರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುತ್ತಿದ್ದೇವೆ, ಐದು ಗ್ಯಾರಂಟಿಗಳು ಜನರ ಮನಕ್ಕೆ ಮುಟ್ಟುವ ಹಾಗೆ ಮಾಡಿದರೆ ನಮ್ಮ ಚುನಾವಣೆ ಮುಗಿದ ಹಾಗೆ ಎಂದು ತಿಳಿಸಿದರು.

ನಮ್ಮ ಗ್ಯಾರಂಟಿಗಳನ್ನು ಬಿಜೆಪಿಯವರು ಮೋದಿ ಗ್ಯಾರಂಟಿ ರೀತಿಯಲ್ಲಿ ಬಿಂಬಿಸುತ್ತಿದ್ದಾರೆ. ಆದರೆ ನಮ್ಮ ಐದು ಗ್ಯಾರಂಟಿಗಳು ಅನುಷ್ಠಾನಕ್ಕೆ ಬಂದಾಗಿದೆ. ಮೃಣಾಲ ಮತ್ತು ಪ್ರಿಯಾಂಕ ಸಿದ್ದರಾಮಯ್ಯನವರ ಗ್ಯಾರಂಟಿ ಅಭ್ಯರ್ಥಿಗಳು ಎಂದು ಹೇಳಿದರು.

## ಬೆಂಗಳೂರು ಮೆಡಿಕಲ್ ಕಾಲೇಜಿನ 47 ವಿದ್ಯಾರ್ಥಿನಿಯರು ಅಸ್ವಸ್ಥ: ಆಸ್ಪತ್ರೆಗೆ ದಾಖಲು



ಬೆಂಗಳೂರು: ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನೆ ಸಂಸ್ಥೆಯ (ಬಿಎಂಸಿಆರ್‌ಐ) ಮಹಿಳಾ ಹಾಸ್ಟೆಲ್ನ 47 ವಿದ್ಯಾರ್ಥಿನಿಯರು ಏಕಾಏಕಿ ಅಸ್ವಸ್ಥರಾಗಿದ್ದು, ಅವರನ್ನು ವಿಕ್ಟೋ–ರಿಯಾ ಆಸ್ಪತ್ರೆಗೆ ದಾಖಲಿಸಲಾಗಿದೆ.

ಇವರಲ್ಲಿ 28 ಮಂದಿ ಟ್ರಾಮಾ ಕೇರ್ ಸೆಂಟರ್‌ನಲ್ಲಿದ್ದಾರೆ, 13 ಮಂದಿ ಎಚ್ ಬ್ಲಾಕ್‌ನಲ್ಲಿ ಮತ್ತು ಮೂವರು ಐಸಿಯುನಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ವಾಂತಿ, ಭೇದಿಯಿಂದ ತ್ರೀವ ಅಸ್ವಸ್ಥಗೊಂಡಿದ್ದು, ಆತಂಕಕ್ಕೆ ಕಾರಣವಾಗಿದೆ.

ಅವರಿಗೆ ತೀವ್ರವಾದ ಗ್ಯಾಸ್ಟ್ರೋಎಂಟರೈಟಿಸ್ ಎಂದು ಹೇಳಲಾಗಿದೆ. ಒಂದೇ ಹಾಸ್ಟೆಲ್ನ 47 ವಿದ್ಯಾರ್ಥಿನಿಯರು ಅಸ್ವಸ್ಥ ಪ್ರಕರಣ ಬೆನ್ನಲ್ಲೇ ಕಾಲರಾದ ಶಂಕೆ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಮಾದರಿಯನ್ನ ವೈದ್ಯರು ಪರೀಕ್ಷೆಗೆ ಕಳುಹಿಸಿದ್ದು, ವಿದ್ಯಾರ್ಥಿನಿಯರ ಪರೀಕ್ಷೆ ವರದಿ ಸಿಗುವ ನಿರೀಕ್ಷೆ ಇದೆ. ಇನ್ನು, ಪ್ರಕರಣದ ಬಳಿಕ ಎಚ್ಚೆತ್ತ ಮೆಡಿಕಲ್ ಕಾಲೇಜು ಆಡಳಿತ ಮಂಡಳಿ, ಹಾಸ್ಟೆಲ್ ನ ನೀರನ್ನ ಪರಿಶೀಲಿಸಲು ಸೂಚನೆ ನೀಡಿದೆ.

ಕರ್ನಾಟಕ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಶುಕ್ರವಾರ ಹೇಳಿಕೆ ನೀಡಿದ್ದು, ರಾಜ್ಯದಲ್ಲಿ ಈ ವರ್ಷ ಇದುವರೆಗೆ ಆರು ಕಾಲರಾ ಪ್ರಕರಣಗಳು ವರದಿಯಾಗಿವೆ, ಅದರಲ್ಲಿ ಐದು ಮಾರ್ಚ್‌ನಲ್ಲಿ ವರದಿಯಾಗಿದೆ.

ನೀರಿನ ಬಿಕ್ಕಟ್ಟಿನೊಂದಿಗೆ ತೀವ್ರವಾದ ಶಾಖವು ಕಾಲರಾ ಏಕಾಏಕಿ ಭೀತಿಗೆ ಕಾರಣವಾಗಿದೆ. ಸದ್ಯ ಚಿಕಿತ್ಸೆ ಪಡೆಯುತ್ತಿರುವ ಎಲ್ಲ ವಿದ್ಯಾರ್ಥಿನಿಯರ ಆರೋಗ್ಯ ಸ್ಥಿರವಾಗಿದೆ ಎಂದು ವೈದ್ಯರು ತಿಳಿಸಿರುವುದಾಗಿ ವೈದ್ಯರು ತಿಳಿಸಿದ್ದಾರೆ.

## ವಿಸ್ತಾರ ವಿಮಾನಗಳ ರದ್ದು ಹಿನ್ನೆಲೆ ವಿಮಾನ ಪ್ರಯಾಣ ದರ ಏರಿಕೆ ಸಾಧ್ಯತೆ?



ಬೆಂಗಳೂರು: ಈ ಹಿನ್ನೆಲೆಯಲ್ಲಿ ವಿಸ್ತಾರಾ ವಿಮಾನಗಳಲ್ಲಿ ಪ್ರಯಾಣಿಸಲು ಈಗಾಗಲೇ ಟಿಕೆಟ್ ಕಾಯ್ದಿರಿಸಿರುವವರು ಹಾಗೂ ವಿಮಾನ ರದ್ದಾದ ಹಿನ್ನೆಲೆಯಲ್ಲಿ ಬೇರೆ ವಿಮಾನ ಸಂಸ್ಥೆಗಳಲ್ಲಿ ಟಿಕೆಟ್ ಕಾಯ್ದಿರಿಸಿಕೊಳ್ಳುವಂತೆ ಸೂಚನೆ ಪಡೆದಿರುವವರು ಬೇರೆ ವಿಮಾನ ಸಂಸ್ಥೆಗಳಲ್ಲಿ ಟಿಕೆತ್ ಕಾಯ್ದಿರಿಸುವ ಅನಿವಾರ್ಯತೆಗೆ ಸಿಲುಕಿದ್ದಾರೆ.

ಈ ಹಿನ್ನೆಲೆಯಲ್ಲಿ ವಿಮಾನ ಪ್ರಯಾಣ ದರ ಏರಿಕೆಯಾಗುವ ಸಾಧ್ಯತೆ ಇದೆ ಎಂದು ವಿಶ್ಲೇಷಿಸಲಾಗುತ್ತಿದೆ.

ಬೆಂಗಳೂರು– ಉದಯ್ ಪುರ, ಮುಂಬೈ–ಕೊಚ್ಚಿ, ದೆಹಲಿ–ಶ್ರೀನಗರ, ದೆಹಲಿ– ಇಂದೋರ್ ಮಾರ್ಗದಲ್ಲಿ ಸಂಚರಿಸುತ್ತಿದ್ದ ವಿಸ್ತಾರ ವಿಮಾನಗಳು ರದ್ದುಗೊಂಡಿವೆ. ಬೆಂಗಳೂರಿನಲ್ಲಿರುವ ಆಸ್ಪತ್ರೆಯ ಸುರಕ್ಷತಾ ಸಲಹೆಗಾರ ಅಶ್ವಿನ್ ಸಿದ್ದರಾಮಯ್ಯ ಈ ಬಗ್ಗೆ ಪೋಸ್ಟ್ ಮಾಡಿದ್ದು "ನಾನು ದೆಹಲಿಯಿಂದ ಬೆಂಗಳೂರಿಗೆ ವಿಮಾನವನ್ನು ಕಾಯ್ದಿರಿಸಲು 16,000 ರೂಪಾಯಿಗಳನ್ನು ಖರ್ಚು ಮಾಡಿದೆ ಏಕೆಂದರೆ ನಾನು 7,500 ಕ್ಕೆ ಬುಕ್ ಮಾಡಿದ್ದ ಫ್ಲೈಟ್ ಅನ್ನು ವಿಸ್ತಾರಾ ರದ್ದುಗೊಳಿಸಿದೆ ಎಂದು ಹೇಳಿದ್ದಾರೆ.

# ಸಿಎಂ ಸಿದ್ದರಾಮಯ್ಯ, ಡಿಕೆಶಿಯ ಬೃಹತ್ ರೋಡ್ ಶೋ



ಕೋಲಾರ: ಪ್ರಜಾಪ್ರಭುತ್ವ ಯುದ್ಧಕ್ಕೆ ದಿನಗಣನೆ ಆರಂಭವಾಗಿದೆ. ಲೋಕ ಕದನದ ಸೇನಾನಿಗಳು ಅಖಾಡಕ್ಕೆ ಇಳಿದು ಗೆಲುವಿಗಾಗಿ ರಣಕಹಳೆ ಮೊಳಗಿಸುತ್ತಿದ್ದಾರೆ. ಇದೀಗ ಮತದಾನ ಸಮರದಲ್ಲಿ ಗೆಲ್ಲಲೇ ಬೇಕೆಂದು ಪಣ ತೊಟ್ಟಿರೋ ಕಾಂಗ್ರೆಸ್ ಪಡೆ ಲೋಕ ತಂತ್ರವನ್ನ ಹೆಣೆಯುತ್ತಿದೆ. ಇವತ್ತಿನಿಂದ ಮುಳಬಾಗಿಲಿನ ಕುರುಡುಮಲೆ ಕ್ಷೇತ್ರದಿಂದ ಎರಡನೇ ಹಂತದ ಪ್ರಜಾಧ್ವನಿ ಯಾತ್ರೆಯನ್ನ ಆರಂಭಿಸಲು ಸಜ್ಜಾಗಿದೆ.

ಲೋಕಸಭಾ ಕದನ ಕಣದಲ್ಲಿ ಇವತ್ತಿನಿಂದ ಜೋಡೆತ್ತುಗಳ ಅಬ್ಬರ ಶುರುವಾಗಲಿದೆ. ಪ್ರಜಾಪ್ರಭುತ್ವ ಯುದ್ಧದಲ್ಲಿ ಎದುರಾಳಿಗಳ ಮಣ್ಣುಮುಕ್ಕಿಸಲು ಕೈ ಕಲಿಗಳು ರಣಾಂಗಣಕ್ಕೆ ಎಂಟ್ರಿಕೊಡಲಿದ್ದಾರೆ.. ಚಿನ್ನದ ನಾಡಿನಿಂದ ಕಾಂಗ್ರೆಸ್ ನಾಯಕರು ಭರ್ಜರಿ ಪ್ರಚಾರವನ್ನ ಆರಂಭಿಸಲಿದ್ದಾರೆ.

ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ರಣಕಹಳೆ ಇವತ್ತಿನಿಂದ ಲೋಕಸಭಾ ಚುನಾವಣೆಯ ಪ್ರಚಾರದ ಅಖಾಡಕ್ಕೆ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ಧುಮುಕಲಿದ್ದಾರೆ. ಇವತ್ತು ಬೆಳಗ್ಗೆ 9.30ಕ್ಕೆ ಹೆಚ್‌ಎಎಲ್‌ನಿಂದ ಹೆಲಿಕಾಪ್ಟರ್ ಮೂಲಕ ಸಿಎಂ, ಡಿಸಿಎಂ ಮುಳಬಾಗಿಲಿಗೆ ತೆರಳಲಿದ್ದಾರೆ.

ಬಳಿಕ ಇಬ್ಬರೂ ಸೇರಿ ಜೋಡೆತ್ತಿನಂತೆ ಪ್ರಜಾಧ್ವನಿ–2 ಯಾತ್ರೆಯ ಮೂಲಕ ಒಗ್ಗಟ್ಟಿನ ರಣ–ಕಹಳೆ ಮೊಳಗಿಸಲಿದ್ದಾರೆ. ಇಷ್ಟು ದಿನ ಪ್ರತ್ಯೇಕವಾಗಿ ಬಹಿರಂಗ ಸಭೆ, ಅಭ್ಯರ್ಥಿಗಳ ಪರವಾಗಿ ನಡೆಯುತ್ತಿದ್ದ ಕಾಂಗ್ರೆಸ್ ರಣಕಲಿಗಳು ಇವತ್ತಿನಿಂದ ಕೆಲ ಕ್ಷೇತ್ರಗಳಲ್ಲಿ ಜಂಟಿಯಾಗಿ ಹಾಗೂ ಪ್ರತ್ಯೇಕವಾಗಿ ಪ್ರಚಾರ ನಡೆಸಲು ಸಿಎಂ, ಡಿಸಿಎಂ ಮುಂದಾಗಿದ್ದಾರೆ. ಕುರುಡುಮಲೆ ದೇವಸ್ಥಾನದಿಂದಲೆ ಜೋಡೆತ್ತುಗಳ ಪ್ರಜಾಧ್ವನಿ– 2 ಯಾತ್ರೆ ಆರಂಭವಾಗಲಿದೆ.

**ಕುರುಡುಮಲೆ ದೇವಸ್ಥಾನದಲ್ಲಿ ಸಿಎಂ, ಡಿಸಿಎಂ ವಿಶೇಷ ಪೂಜೆ**

ಕೋಲಾರ ಜಿಲ್ಲೆ ಮುಳಬಾಗಿಲಿನಲ್ಲಿರೋ ಕುರುಡುಮಲೆ ದೇವಸ್ಥಾನದಲ್ಲಿ ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿ.ಕೆ. ಶಿಕುಮಾರ್ ಪೂಜೆ ಸಲ್ಲಿಸಲಿದ್ದಾರೆ. ಇವತ್ತು ಬೆಳಗ್ಗೆ 10:30ಕ್ಕೆ ಕುರುಡುಮಲೆ ಗಣಪತಿಗೆ ಪೂಜೆ ಸಲ್ಲಿಸಿ ಪ್ರಚಾರ ಆರಂಭಿಸಲಿದ್ದಾರೆ. ಬಳಿಕ ಸಿದ್ದರಾಮಯ್ಯ, ಡಿಕೆಶಿ ಬೃಹತ್ ರೋಡ್ ಶೋ ನಡೆಸಲಿದ್ದಾರೆ. ಮೊದಲ ದಿನವಾದ ಇಂದು ಕೋಲಾರದಲ್ಲಿ ಸಿಎಂ, ಡಿಸಿಎಂ ಅಬ್ಬರದ ಕ್ಯಾಂಪೇನ್ ಮಾಡಲಿದ್ದಾರೆ.

ಅಂದ್ಹಾಗೆ ಕುರುಡುಮಲೆ ದೇವಸ್ಥಾನದಿಂದ ಪ್ರಾರಂಭವಾದ ಕಾರ್ಯಕ್ರಮಗಳ ಹೆಚ್ಚು ಫಲ ನೀಡಿವೆ ಎಂಬ ನಂಬಿಕೆ ಇದೆ. ಹೀಗಾಗಿ ಎಸ್.ಎಂ, ಕೃಷ್ಣ ಕಾಲದಿಂದಲೂ ಕುರುಡುಮಲೆಯಿಂದ ಕಾಂಗ್ರೆಸ್ ಕಾರ್ಯಕ್ರಮಗಳು ಆಯೋಜನೆ ಆಗುತ್ತಿವೆ. ಕಳೆದ ವಿಧಾನಸಭಾ ಚುನಾವಣೆಯಲ್ಲೂ ಕುರುಡುಮಲೆಯಿಂದಲೇ ಸಿಎಂ, ಡಿಸಿಎಂ ಯಾತ್ರೆ ಆರಂಭಿಸಿದ್ದು. ಹೀಗಾಗಿ ಪ್ರಜಾಧ್ವನಿ 2 ಯಾತ್ರೆಯನ್ನ ಗಣಪತಿ ಸನ್ನಿಧಿಯಿಂದ ಪ್ರಾರಂಭ ಮಾಡಲು ಕೈ ಪಡೆ ಮುಂದಾಗಿದೆ. ಇನ್ನೂ ಕೋಲಾರದ ಬಳಿಕ ಜೋಡೆತ್ತು ಬೆಂಗಳೂರಿನಲ್ಲಿ ಲೋಕಕಹಳೆ ಮೊಳಗಿಸಲಿದೆ.

## ಬೆಂಗಳೂರು: ಇಬ್ಬರು ವೈದ್ಯಕೀಯ ವಿದ್ಯಾರ್ಥಿನಿಯರಲ್ಲಿ ಕಾಲರಾ ಪತ್ತೆ; ಹೆಚ್ಚಿದ ಆತಂಕ, ಆರೋಗ್ಯ ಇಲಾಖೆ ಅಲರ್ಟ



ಬೆಂಗಳೂರು: ಬೆಂಗಳೂರು ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಸಂಶೋಧನೆ ಸಂಸ್ಥೆಯ (BMCRI) ಮಹಿಳಾ ಹಾಸ್ಟೆಲ್ನ 47 ವಿದ್ಯಾರ್ಥಿನಿಯರು ಏಕಾಏಕಿ ಅಸ್ವಸ್ಥರಾಗಿದ್ದು, ಅವರನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಈ ಪೈಕಿ ಇಬ್ಬರು ವಿದ್ಯಾರ್ಥಿನಿಯರಲ್ಲಿ ಕಾಲರಾ ಅಂಶ ಪತ್ತೆಯಾಗಿದೆ.

ವಾಂತಿ–ಭೇದಿಯಿಂದ ತೀವ್ರ ಅಸ್ವಸ್ಥಗೊಂಡಿದ್ದ 47 ವೈದ್ಯಕೀಯ ವಿದ್ಯಾರ್ಥಿನಿಯರನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಕಾಲರಾದ ಶಂಕೆ ಹಿನ್ನೆಲೆಯಲ್ಲಿ ವಿದ್ಯಾರ್ಥಿನಿಯರ ಮಾದರಿಯನ್ನು ವೈದ್ಯರು ಪರೀಕ್ಷೆಗೆ ಕಳುಹಿಸಿದ್ದು, ಈ ಪೈಕಿ ಇಬ್ಬರಲ್ಲಿ ಕಾಲರಾ ಅಂಶ ಪತ್ತೆಯಾಗಿದೆ. ಇನ್ನು ಮಹಿಳಾ ಆಯೋಗದ ಅಧ್ಯಕ್ಷೇ ನಾಗಲಕ್ಷ್ಮೀ ಚೌಧರಿ ಭೇಟಿ ನೀಡಿ, ವಿದ್ಯಾರ್ಥಿನಿಯರ ಆರೋಗ್ಯ ವಿಚಾರಿಸಿದರು.

ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ನಾಗಲಕ್ಷ್ಮೀ ಚೌಧರಿ ಅವರು, ಬಿಎಂಸಿಆರ್‌ಐ ಹಾಸ್ಟೆಲ್ ನಲ್ಲಿ ಕನಿಷ್ಠ ಸ್ವಚ್ಛತೆಯಿಲ್ಲದ ಬಗ್ಗೆ ಹಲವು ಬಾರಿ ದೂರು ವಿದ್ಯಾರ್ಥಿಗಳು ನೀಡಿದ್ದಾರೆ. ಯಾವುದು ಸರಿಯಾಗಿಲ್ಲ. ಈ ಬಗ್ಗೆ ನಾನು ಡಾಕ್ಯುಮೆಂಟ್ ಕೇಳಿದ್ದೇನೆ. ಒಂದು ವಾರದಲ್ಲಿ ವರದಿಯನ್ನು ಕೊಡಬೇಕು. ಅಲ್ಲದೆ ಒಂದು ವಾರದಲ್ಲಿ ಸಮಸ್ಯೆ ಬಗೆಹರಿಸಲು ಹೇಳಿದ್ದೇನೆ. ಕೋಣೆಗಳು ಚಿಕ್ಕದಾಗಿವೆ. ಸರಿಯಾದ ವ್ಯವಸ್ಥೆ ಇಲ್ಲ. ವಿದ್ಯಾರ್ಥಿನಿಯರ ವಸತಿ ನಿಲಯಕ್ಕೆ ವಿಕ್ಟೋರಿಯಾ ಆಸ್ಪತ್ರೆಯಿಂದ ಊಟ ಹೋಗುತ್ತದೆ. ಈ ಬಗ್ಗೆ ನಾನು ವೈದ್ಯಕೀಯ ಶಿಕ್ಷಣ ಸಚಿವರ ಗಮನಕ್ಕೆ ತರುತ್ತೇನೆ. ಪ್ರತಿಯೊಂದು ಆಸ್ಪತ್ರೆ ಹಾಗೂ ವಸತಿ ನಿಲಯಕ್ಕೆ ಭೇಟಿ ನೀಡುತ್ತೇನೆ. ಅಲ್ಲಿನ ಸಮಸ್ಯೆ ಬಗ್ಗೆ ತಿಳಿಯುತ್ತೇನೆ. ಈಗ ಸುಮೋಟೋ ಪ್ರಕರಣ ದಾಖಲಾಗಿದೆ ಎಂದು ತಿಳಿಸಿದರು.

## ಪ್ರಧಾನಿ ನರೇಂದ್ರ ಮೋದಿ ಅಪೇಕ್ಷೆಯಂತೆ ಚುನಾವಣೆಯಲ್ಲಿ ಸ್ಪರ್ಧಿಸಿರುವೆ: ಯದುವೀರ್



ಮೈಸೂರು: 'ನಾನು ಪ್ರಧಾನಿ ನರೇಂದ್ರ ಮೋದಿ ಅವರ ಅಪೇಕ್ಷೆಯಂತೆ ಚುನಾವಣೆಯಲ್ಲಿ ಸ್ಪರ್ಧಿಸಿದ್ದೇನೆ' ಎಂದು ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ತಿಳಿಸಿದರು.

ನಗರದ ಕನ್ನೇಗೌಡನಕೊಪ್ಪಲಿನ ವಿವಿಧ ರಸ್ತೆಗಳಲ್ಲಿ ಜೆಡಿಎಸ್ ಮುಖಂಡರೊಂದಿಗೆ ಶನಿವಾರ ತೆರೆದ ವಾಹನದಲ್ಲಿ ಸಂಚರಿಸಿ ಮತ ಯಾಚಿಸಿದರು.

'ನನ್ನನ್ನು ಗೆಲ್ಲಿಸುವ ಮೂಲಕ ಮೋದಿ ಅವರಿಗೆ ಶಕ್ತಿ ತುಂಬಬೇಕು. ಮೈಸೂರು ಮತ್ತು ಕೊಡಗು ಜಿಲ್ಲೆಗಳನ್ನು ಇನ್ನಷ್ಟು ನೆಚ್ಚಿನ ಪ್ರವಾಸಿ ತಾಣವನ್ನಾಗಿ ಅಭಿವೃದ್ಧಿಪಡಿಸುತ್ತೇನೆ. ಈ ಭಾಗದ ಜನರ ಸುಖಗಳಿಗೆ ಸ್ಪಂದಿಸುತ್ತೇನೆ. ನನ್ನ ಕಚೇರಿ ಸದಾ ಅರಮನೆಯಿಂದ ಹೊರಗೆ ಇರುತ್ತದೆ. ಅದು ನನ್ನ ಕಚೇರಿ ಆಗಿರುವುದಿಲ್ಲ. ಕಾರ್ಯಕರ್ತರ ಕಚೇರಿ ಆಗಿರುತ್ತದೆ. ಸರ್ವರಿಗೂ ಮುಕ್ತವಾದ ಸ್ವಾಗತವಿರಲಿದೆ' ಎಂದರು.

'ದೇಶದ ಸಮಗ್ರ ಅಭಿವೃದ್ಧಿಗೆ ಮೋದಿ ಶ್ರಮಿಸುತ್ತಿದ್ದಾರೆ. ಮೈಸೂರಿನಿಂದಲೂ ಅವರಿಗೆ ಶಕ್ತಿ ತುಂಬಬೇಕು' ಎಂದು ಕೋ–ರಿದರು. ಬಿಜೆಪಿ ನಗರ ಜಿಲ್ಲಾ ಘಟಕದ ಅಧ್ಯಕ್ಷ ಎಲ್. ನಾಗೇಂದ್ರ, ಮುಖಂಡರಾದ ಕೆಂಪಣ್ಣ, ಶಂಕರ್, ಎಂ.ಶಿವಕುಮಾರ್ ಪಾಲ್ಗೊಂಡಿದ್ದರು.

ನಂತರ ಯದುವೀರ್, ನಗರದ ವಿವಿಧೆಡೆ ರೋಡ್ ಶೋ ನಡೆಸಿ ಸಾರ್ವಜನಿಕರಿಂದ ಮತ ಯಾಚಿಸಿದರು.

## ಕೇಂದ್ರ ಸರ್ಕಾರದಿಂದ ರಾಜ್ಯಕ್ಕಾಗಿರುವ ಅನ್ಯಾಯದ ಕುರಿತು ಚರ್ಚೆಗೆ ಸಿದ್ಧ: ಸಚಿವ ಕೃಷ್ಣ ಬೈರೇಗೌಡ




ಬೆಂಗಳೂರು: ಕೇಂದ್ರ ಸರ್ಕಾರದಿಂದ ರಾಜ್ಯಕ್ಕೆ ಆಗಿರುವ ಅನ್ಯಾಯದ ಕುರಿತು ಚರ್ಚಿಸಲು ಸಿದ್ಧ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಶುಕ್ರವಾರ ಹೇಳಿದರು.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, 'ಆರ್ಥಿಕತೆ ಹಾಗೂ ಕರ್ನಾಟಕಕ್ಕೆ ಆಗಿರುವ ಅನ್ಯಾಯದ ಕುರಿತು ಸತ್ಯ ಹಾಗೂ ವಾಸ್ತವದ ನೆಲೆಯಲ್ಲಿ ಚರ್ಚೆ ನಡೆಸಲು ನಾಗರಿಕ ಸಮಾಜ ನೀಡಿರುವ ಆಹ್ವಾನವನ್ನು ಸ್ವೀಕರಿಸಿದ್ದೇನೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ನಾನು, ಕೇಂದ್ರ ಹಣಕಾಸು ಸಚಿವರನ್ನು ಮುಕ್ತ ಚರ್ಚೆಗೆ ಆಹ್ವಾನಿಸಿದ್ದೇವೆ. ಅವರು ಭಾಗವಹಿಸುತ್ತಾರೆ ಎಂಬ ನಿರೀಕ್ಷೆಯಲ್ಲಿದ್ದೇವೆ ಎಂದು ಹೇಳಿದ್ದಾರೆ.

# ಬಿಜೆಪಿ–ಜೆಡಿಎಸ್ ಮೈತ್ರಿಯಿಂದ ವಿಚಲಿತ: ಆದಿ ಚುಂಚನಗಿರಿ ಮಠಕ್ಕೆ ಸಿಎಂ ಭೇಟಿ; ಕಾಂಗ್ರೆಸ್ ನಾಯಕರಿಂದ ಒಕ್ಕಲಿಗ ಮಂತ್ರ ಜಪ

ಬೆಂಗಳೂರು: ಲೋಕಸಭಾ ಚುನಾವಣಾ ಕಣದಲ್ಲಿ ಕಾಂಗ್ರೆಸ್ ನಾಯಕರು ಒಕ್ಕಲಿಗ ಟ್ರಂಪ್ ಕಾರ್ಡ್ ಪ್ಲೇ ಮಾಡಲು ಸಜ್ಜಾಗಿದ್ದಾರೆ. ಬೆಂಗಳೂರು ಮತ್ತು ಹಳೇ ಮೈಸೂರು ಭಾಗದಲ್ಲಿ ಕಾಂಗ್ರೆಸ್ ಒಕ್ಕಲಿಗ ವೋಟ್ ಬ್ಯಾಂಕ್ ಭದ್ರಪಡಿಸಿಕೊಳ್ಳುವ ಪ್ಲಾನ್ ಮಾಡಿದೆ.

ಆದಿಚುಂಚನಗಿರಿ ಮಠಕ್ಕೆ ಕೈ ನಾಯಕರೆಲ್ಲಾ ಸಾಮೂಹಿಕವಾಗಿ ಭೇಟಿ ಕೊಟ್ಟು ಲೋಕಸಭೆ ಚುನಾವಣೆಗಾಗಿ ತಂತ್ರ ರೂಪಿಸುತ್ತಿದ್ದಾರೆ. ಬಿಜೆಪಿ ಮತ್ತು ಜೆಡಿ–ಎಸ್ ಮೈತ್ರಿಯಿಂದಾಗಿ ಶೇ. 90 ರಷ್ಟು ಕಾರ್ಯಕರ್ತರು ಸಂತೋಷಗೊಂಡಿದ್ದಾರೆ ಮತ್ತು ಒಕ್ಕಲಿಗ ಭದ್ರಕೋಟೆಯಾದ ಹಳೇ ಮೈಸೂರು ಭಾಗದಲ್ಲಿ ಈ ಮೈತ್ರಿಯಿಂದ ಕಾಂಗ್ರೆಸ್ ಪಕ್ಷಕ್ಕೆ ಹಿನ್ನಡೆಯಾಗುವ ಸಾಧ್ಯತೆಯಿದೆ ಎಂದು ಸಮೀಕ್ಷೆಯಿಂದ ಬಹಿರಂಗವಾಗಿದೆ.



ಇದಕ್ಕಾಗಿಯೇ ಗುರುವಾರ ತಡರಾತ್ರಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೇತೃತ್ವದಲ್ಲಿ ಕೋಲಾರದ ಕೆ ವಿ ಗೌತಮ್ ಸೇರಿದಂತೆ ಕಾಂಗ್ರೆಸ್ ಅಭ್ಯರ್ಥಿಗಳು ಬೆಂಗಳೂ–ರಿನಲ್ಲಿರುವ ಆದಿ ಚುಂಚನಗಿರಿ ಮಠದ ಮುಖ್ಯಸ್ಥರಾದ ಶ್ರೀ ನಿರ್ಮಲಾನಂದನಾಥ ಸ್ವಾಮಿಗಳ ಬಳಿ ತೆರಳಿ ಆಶೀರ್ವಾದ ಪಡೆದರು. ಮೈಸೂರು–ಕೊಡಗಿನ ಕಾಂಗ್ರೆಸ್ ಅಭ್ಯರ್ಥಿ ಎಂ.ಲಕ್ಷ್ಮಣ್ ಒಕ್ಕಲಿಗರಾಗಿದ್ದಾರೆ. ಅವರು ಕೂಡ ಆಶೀರ್ವಾದ ಪಡೆದರು, ಸಿದ್ದರಾಮಯ್ಯನವರು ಶ್ರೀಗಳ ಜೊತೆ ಊಟ ಮಾಡಿದರು. ಶೇ. 30–35 ರಷ್ಟು ಒಕ್ಕಲಿಗರು ಲಕ್ಷ್ಮಣ್‌ಗೆ ಒಲವು ತೋರಿದರೆ, ನೆಕ್ ಟು ನೆಕ್ ಫೈಟ್ ಇರುತ್ತದೆ. ದಲಿತರು ಮತ್ತು ಅಲ್ಪಸಂಖ್ಯಾತರು ಕಾಂಗ್ರೆಸ್ ಗೆ ಬೆಂಬಲ ನೀಡುವುದರಿಂದ ಅನಿರೀಕ್ಷಿತ ಫಲಿತಾಂಶ ಹೊರಬೀಳಲಿದೆ ಎಂದು ನಕೆಪಿಸಿಸಿ ಉಪಾಧ್ಯಕ್ಷ ಜಿ ಎನ್ ನಂಜುಂಡ ಸ್ವಾಮಿ ಅಭಿಪ್ರಾಯ ಪಟ್ಟಿದ್ದಾರೆ.

ಬಹುತೇಕ ಕ್ಷೇತ್ರಗಳಲ್ಲಿ ಇದೇ ಪರಿಸ್ಥಿತಿ ಇರುವ ಕಾರಣ ಬೆಂಗಳೂರು ದಕ್ಷಿಣ ಅಭ್ಯರ್ಥಿ ಸೌಮ್ಯರೆಡ್ಡಿ, ಬೆಂಗಳೂರು ಉತ್ತರ ಅಭ್ಯರ್ಥಿ ಪ್ರೊ.ರಾಜೀಗೌಡ, ತುಮಕೂ–ರಿನ ಎಸ್‌ಪಿ ಮುದ್ದಹನುಮೇಗೌಡ ಸೇ–ರಿದಂತೆ ಒಕ್ಕಲಿಗ ಮುಖಂಡರು ಹಾಗೂ ಅಭ್ಯರ್ಥಿಗಳು ಸ್ವಾಮೀಜಿಯವರನ್ನು ಭೇಟಿ ಮಾಡಿದರು. ಎಲ್ಲೆಲ್ಲಿ ಒಕ್ಕಲಿಗರು ಗೆಲ್ಲುವ ಅವಕಾಶ ಇದೆಯೋ ಅಲ್ಲೇಲ್ಲ ಕಾಂಗ್ರೆಸ್ ಟಿಕೆಟ್ ಕೊಟ್ಟಿದೆ. ಒಕ್ಕಲಿಗರು, ಬಂಟ್ಸ್ ಮತ್ತು ರೆಡ್ಡಿ ಸೇರಿದಂತೆ ಸಮುದಾಯದ ನಾಯಕರಿಗೆ ಕಾಂಗ್ರೆಸ್ ಎಂಟು ಟಿಕೆಟ್ (ಅತಿ ಹೆಚ್ಚು) ನೀಡಿದೆ ಎಂದು ಕಂದಾಯ ಸಚಿವ ಕೃಷ್ಣ ಬೈರೇಗೌಡ ಹೇಳಿದ್ದಾರೆ.

ಒಕ್ಕಲಿಗರು ಅಥವಾ ಗೌಡರು ಎಂದು ಒಂದೇ ಸೂರಿನಡಿ ಒಗ್ಗೂಡಿದ ಈ ಸಮುದಾಯಗಳ ಮತಗಳನ್ನು ಸೆಳೆಯಲು ಕಾಂಗ್ರೆಸ್ ಬಯಸುತ್ತಿದೆ ಎಂದು ಅವರು ಹೇಳಿದರು. ಒಟ್ಟಾರೆಯಾಗಿ, ಸಮುದಾಯವು ಇತ್ತೀಚಿನ ದಿನಗಳಲ್ಲಿ ಎಲ್ಲಾ ಪಕ್ಷಗಳಿಗೆ ಪ್ರಜಾಸತ್ತಾತ್ಮಕವಾಗಿ ಮತ ಹಾಕಿದೆ. ಕಳೆದ ವಿಧಾನಸಭಾ ಚುನಾವಣೆ ವೇಳೆ ಡಿಸಿಎಂ ಡಿಕೆ ಶಿವಕುಮಾರ್ ಅವರ ಕಾರಣದಿಂದ ಸಾಕಷ್ಟು ಜನ ಕಾಂಗ್ರೆಸ್‌ಗೆ ಒಲವು ತೋರಿದ್ದಾರೆ ಎಂದು ಕಾಂಗ್ರೆಸ್ ಮುಖಂಡರೊಬ್ಬರು ಹೇಳಿದ್ದಾರೆ.

ಆದರೆ ಈ ಬಾರಿ ಮಂಡ್ಯದಿಂದ ಕಣಕ್ಕಿಳಿದಿರುವ ಸಮುದಾಯದ ಪರಮಾಪ್ತ ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರ ಪುತ್ರ ಮಾಜಿ ಸಿಎಂ ಹೆಚ್ ಡಿ ಕುಮಾರಸ್ವಾಮಿ ಬಗ್ಗೆ ಕಾಂಗ್ರೆಸ್ ನಾಯಕತ್ವ ಎಚ್ಚರಿಕೆ ವಹಿಸಿದೆ. ಇದು ವಿಶ್ಲೇಷಕರ ಪ್ರಕಾರ, ಪ್ರದೇಶದಲ್ಲಿ ಏರಿಳಿತದ ಪರಿಣಾಮವನ್ನು ಹೊಂದಲಿದೆ ಎಂದು ಹೇಳಲಾಗಿದೆ.

# ತಾಪಮಾನ ಏರಿಕೆ: ಬಿಸಿಗಾಳಿ, ನಿರ್ಜಲೀಕರಣ ತಡೆಗೆ ಮುನ್ನೆಚ್ಚರಿಕೆ ವಹಿಸಲು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ನಿರ್ದೇಶನ

ಬಳ್ಳಾರಿ: ಜಿಲ್ಲೆಯಲ್ಲಿ ಬೇಸಿಗೆಯ ತಾಪಮಾನ ಏರುತ್ತಿರುವ ಹಿನ್ನೆಲೆಯಲ್ಲಿ ಆರೋಗ್ಯ ಸಮಸ್ಯೆಗಳನ್ನು ತಡೆಗಟ್ಟಲು ಆರೋಗ್ಯ ಇಲಾಖೆಯು ಅಗತ್ಯ ಮುಂಜಾಗ್ರತಾ ಕ್ರಮ ವಹಿಸಬೇಕು ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ವೈದ್ಯಾಧಿಕಾ-ರಿಗಳಿಗೆ ಸೂಚನೆ ನೀಡಿದರು.



ಅವರು, ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ಸಭಾಂಗಣದಲ್ಲಿ ಹಮ್ಮಿಕೊಂಡಿದ್ದ ಹವಾಮಾನ ಬದಲಾವಣೆ ಮತ್ತು ಮಾನವ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮದಡಿ ಬೇಸಿಗೆ ಸಮಯದಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಜಿಲ್ಲಾ ಮತ್ತು ತಾಲ್ಲೂಕು ಆರೋಗ್ಯಾಧಿಕಾರಿಗಳ ಜೊತೆ ಸಭೆ ನಡೆಸಿ ಅವರು ಮಾತನಾಡಿದರು.

ಬೇಸಿಗೆ ತಾಪಮಾನ ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಉಷ್ಣತೆಗೆ ಸಂಬಂಧಿಸಿದ ಆರೋಗ್ಯ ಸಮಸ್ಯೆಗಳನ್ನು ತಡೆಯಲು, ಹವಾಮಾನ ಬದಲಾವಣೆ ಮತ್ತು ಮಾನವ ಆರೋಗ್ಯದ ರಾಷ್ಟ್ರೀಯ ಕಾರ್ಯಕ್ರಮ ಹೊರಡಿಸಿದ ನಿರ್ದೇಶನಗಳು ಮತ್ತು ಸಲಹೆಗಳ ಆಧಾರದಲ್ಲಿ, ಸಾರ್ವಜನಿಕರ ಆರೋಗ್ಯದ ಹಿತದೃಷ್ಟಿಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದರು.

ಜಿಲ್ಲೆಯಲ್ಲಿ ಬೇಸಿಗೆ ಸಮಯದಲ್ಲಿ ಅತಿಹೆಚ್ಚು ತಾಪಮಾನ ಹೆಚ್ಚುತ್ತಿರುವ ಹಿನ್ನಲೆಯಲ್ಲಿ ನಿರ್ಜಲೀಕರಣದಿಂದ ಅನಾರೋಗ್ಯ ಸಂಭವ ಹಿನ್ನಲೆಯಲ್ಲಿ ಎಲ್ಲಾ ಜಿಲ್ಲಾ ಮತ್ತು ತಾಲ್ಲೂಕು ಆಸ್ಪತ್ರೆಗಳಲ್ಲಿ ಅಗತ್ಯ ಚಿಕಿತ್ಸೆ ವ್ಯವಸ್ಥೆ ಮಾಡಿಕೊಳ್ಳಬೇಕು ಎಂದು ಹೇಳಿದರು.

ನಗರ, ಪಟ್ಟಣ ಹಾಗೂ ಇತರೆ ಪ್ರದೇಶಗಳಲ್ಲಿ ಕಟ್ಟಡ ಕಾರ್ಮಿಕ-ರಿಗೆ ತೊಂದರೆಯಾಗದಂತೆ, ನಿಗದಿತ ವೇಳೆಯಲ್ಲಿಯೇ ಕಾರ್ಯನಿರ್ವಹಿಸಲು ಗುತ್ತಿಗೆದಾರರಿಗೆ ಸೂಚಿಸಬೇಕು ಎಂದರು.

ಕುಡಿಯುವ ನೀರಿನ ಸಮಸ್ಯೆಯಾಗುವಂತಹ ಹಳ್ಳಿಗಳನ್ನು ಗುರುತಿಸಿ ಅಲ್ಲಿನ ನೀರಿನ ಸಮಸ್ಯೆ ಪರಿಹರಿಸಲು ಕ್ರಮ ವಹಿಸಬೇಕು ಮತ್ತು ಕುಡಿಯುವ ನೀರಿನ ಸೌಲಭ್ಯಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಬೇಕು ಎಂದು ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಪ್ರಾಣಿಗಳಲ್ಲಿ ಬಿಸಿಗಾಳಿಗೆ ಸಂಬಂಧಿತ ಕಾಯಿಲೆಯ ಚಿಕಿತ್ಸೆಗೆ ನಿಯಮಾನುಸಾರ ಸಂಬಂಧಿಸಿದ ಪಶು ವೈದ್ಯಕೀಯ ಔಷಧಗಳನ್ನು ಶೇಖರಣೆ ಮಾಡಬೇಕು ಎಂದು ಪಶು ವೈದ್ಯಾಧಿಕಾರಿಗಳಿಗೆ ಸೂಚನೆ ನೀಡಿದರು.

ಹಳ್ಳಿ ಭಾಗಗಳಲ್ಲಿ ಅಗ್ನಿ ಅವಘಡ ಸಂಭವಿಸುವ ಸಾಧ್ಯತೆಗಳಿದ್ದು, ತುರ್ತು ಕರೆಗಳಿಗೆ ಶೀಘ್ರವೇ ಸ್ಪಂದಿಸಬೇಕು. ಸಹಾಯವಾಣಿ ಸಂಖ್ಯೆ ಹೆಚ್ಚು ಪ್ರಚುರಪಡಿಸಬೇಕು ಹಾಗೂ ಅಲ್ಲಲ್ಲಿ ಪ್ರದರ್ಶಿಸಬೇಕು ಎಂದು ಅಗ್ನಿಶಾಮಕ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಮಾತನಾಡಿ, ಜಿಲ್ಲೆಯಲ್ಲಿ ಲಕ್ಷಕ್ಕೂ ಅಧಿಕ ಜನರು ನರೇಗಾ ಯೋಜನೆಯಡಿ ಕೆಲಸ ನಿರ್ವಹಿಸುತ್ತಿದ್ದಾರೆ. ಆಯಾ ತಾಲ್ಲೂಕು ಮಟ್ಟದ ವೈದ್ಯಾಧಿಕಾರಿಗಳು ಕಾಮಗಾರಿ ಸ್ಥಳಗಳಿಗೆ ನಿಯಮಿತವಾಗಿ ಭೇಟಿ ನೀಡುವ ಮೂಲಕ ಆರೋಗ್ಯ ತಪಾಸಣೆ ಕೈಗೊಳ್ಳಬೇಕು ಎಂದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್ ಬಾಬು ಅವರು ಮಾತನಾಡಿ, ಬಿಸಿಗಾಳಿ ಆಘಾತದ ನಿರ್ವಹಣೆಗೆ ಜಿಲ್ಲಾಸ್ಪತ್ರೆ ಮತ್ತು ತಾಲೂಕು ಆಸ್ಪತ್ರೆಗಲ್ಲಿ ಬೆಡ್ ಗಳನ್ನು ಮೀಸಲಿಡಲಾಗಿದೆ. ಸಾರ್ವಜನಿಕರು ವಹಿಸಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಲಾಗಿದೆ. ಜಿಲ್ಲಾ ಮಟ್ಟದಲ್ಲಿ ನೋಡಲ್ ಅಧಿಕಾರಿ, ಆರೋಗ್ಯ ಸಿಬ್ಬಂದಿ ಹಾಗೂ ಆಶಾ ಕಾರ್ಯಕರ್ತೆಯ-ರಿಗೆ ತರಬೇತಿ ನೀಡಲಾಗಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್, ಸಹಾಯಕ ಆಯುಕ್ತ ಹೇಮಂತ್ ಕುಮಾರ್, ಎಎಸ್ಪಿ ಕೆ.ಪಿ.ರವಿಕುಮಾರ್ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಮತ್ತು ಎಲ್ಲಾ ತಾಲ್ಲೂಕು ವೈದ್ಯಾಧಿಕಾರಿಗಳು ಉಪಸ್ಥಿತರಿದ್ದರು.

# ಹುಚ್ಚಪ್ಪಜ್ಜನ ಕೆರೆಯ ಅಂಗಳದಲ್ಲಿ ಮತದಾನ ಜಾಗೃತಿಗಾಗಿ ಜರುಗಿದ ಸ್ವೀಪ್ ಕಾರ್ಯಕ್ರಮ




ಧಾರವಾಡ: ಮತದಾನ ಜಾಗೃತಿಗಾಗಿ ಮಧ್ಯಾಹ್ನ ಮಾದನಬಾವಿ ಗ್ರಾಮದ ಹುಚ್ಚಪ್ಪಜ್ಜನ ಕೆರೆಯ ಅಂಗಳದಲ್ಲಿ ಸ್ವೀಪ್ ಕಾರ್ಯಕ್ರಮ ಜರುಗಿತ್ತು.

ನರೇಗಾ ಯೋಜನೆಯಡಿ ಕೆರೆ ಹೂಳೆತ್ತುವ ಕಾಮಗಾರಿ ಕೆಲಸಕ್ಕೆ ಆಗಮಿಸಿದ್ದ ಮಾದನಬಾವಿ ಗ್ರಾಮದ ಸುಮಾರು 200 ಜನ ಪುರುಷ ಮತ್ತು ಮಹಿಳಾ ಕೂಲಿ ಕಾರ್ಮಿಕರಿಗೆ ಮತದಾನದ ಮಹತ್ವ ತಿಳಿಸಲಾಯಿತು.

ಜಿಲ್ಲಾ ಸ್ವೀಪ್ ನೋಡಲ್ ಅಧಿಕಾರಿ ಹಾಗೂ ಜಿಲ್ಲಾ ಪಂಚಾಯತ ಸಿಇಓ ಸ್ವರೂಪ ಟಿ.ಕೆ ಅವರು ಮಾತನಾಡಿ, ಮೇ 7 ರಂದು ಎಲ್ಲರೂ ಮತಗಟ್ಟೆಗೆ ಬಂದು ತಪ್ಪದೇ ಮತದಾನ ಮಾಡಬೇಕೆಂದು ತಿಳಿಸಿದರು.

ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ವಿಜಯಕುಮಾರ ಆಜೂರ ಅವರು ಮಾತನಾಡಿ, ನರೇಗಾ ಯೋಜನೆಯಡಿ ಹೆಣ್ಣು- ಗಂಡು ಎಂಬ ಬೇದವಿಲ್ಲ. ಎಲ್ಲರೂ ಸಮಾನರು ಮತ್ತು ಎಲ್ಲರಿಗೂ ಸಮಾನ ವೇತನವಿದೆ.

ಅದರಂತೆ ಮತದಾನದಲ್ಲಿಯೂ ಪುರುಷ ಮತ್ತು ಮಹಿಳೆಗೆ ಸಮಾನ ಹಕ್ಕಿದೆ. ಇಬ್ಬರೂ ಮತಗಟ್ಟೆಗೆ ಬಂದು ಮತದಾನ ಮಾಡಬೇಕೆಂದು ತಿಳಿಸಿದರು.

ನರೇಗಾ ಕೂಲಿ ಕಾರ್ಮಿಕರು ಮತದಾನ ಜಾಗೃತಿ ಮತ್ತು ನರೇಗಾ ಯೋಜನೆಯ ಪ್ಲೇ ಕಾರ್ಡ್ ಗಳನ್ನು ಕೈಯಲ್ಲಿ ಹಿಡಿದು ಮತದಾನ ಜಾಗೃತಿ ಕುರಿತು ಘೋಷಣೆ ಕೂಗಿದರು.

ನೆರೆದ ಎಲ್ಲರಿಗೂ ತರಬೇತಿದಾರ ಕೆ.ಎಂ. ಶೇಖ ಅವರು ಮತದಾರ ಪ್ರತಿಜ್ಞಾವಿಧಿ ಬೋಧಿಸಿದರು. ನರೇಗಾ ಧಾರವಾಡ ತಾಲೂಕು ಸಹಾಯಕ ನಿರ್ದೇಶಕ ಚಂದ್ರು ಪೂಜಾರಿ ಕಾರ್ಯಕ್ರಮ ನಿರ್ವಹಿಸಿದರು.

# ಮತದಾನದ ಹಕ್ಕು ಚಲಾಯಿಸಿ: ಜಿಪಂ ಉಪಕಾರ್ಯದರ್ಶಿ ಗಿರಿಜಾ ಶಂಕರ್



ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಅಂಗವಾಗಿ ಮೇ 07 ರಂದು ನಡೆಯಲಿರುವ ಮತದಾನ ದಿನದಂದು, ಪ್ರತಿಯೊಬ್ಬರೂ ತಮ್ಮ ಮತದಾನದ ಹಕ್ಕನ್ನು ಚಲಾಯಿಸಬೇಕು ಎಂದು ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಗಿರಿಜಾ ಶಂಕರ್ ಅವರು ಹೇಳಿದರು.

ಕಂಪ್ಲಿ ತಾಲೂಕಿನ ಸುಗ್ಗೆನಹಳ್ಳಿ ಹಾಗೂ ಮೆಟ್ರಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ಮದಲಿಂಗ ಕೆರೆ ನಿರ್ಮಾಣ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಮತದಾನದ ಮಹತ್ವ ಕುರಿತು ಅರಿವು ಮೂಡಿಸಿ ಮಾತನಾಡಿದರು.

ಚುನಾವಣೆ ಎಂಬುದು ಪ್ರಜಾಪ್ರಭುತ್ವದ ಹಬ್ಬವಿದ್ದಂತೆ.

ಪ್ರತಿಯೊಬ್ಬರು ವಿವೇಚನೆ ಯಿಂದ ಮತಚಲಾಯಿಸಬೇಕು. ಮತದಾನ ಪ್ರಕ್ರಿಯೆಯಿಂದ ಯಾರು ಸಹ ದೂರ ಉಳಿಯಬಾರದು. ಯಾರೇ ಇರಲಿ ಎಲ್ಲರ ಮತಕ್ಕೂ ಒಂದೇ ಮೌಲ್ಯ ಇರುತ್ತದೆ. ಜಿಲ್ಲೆಯ ಮತದಾನ ಪ್ರಮಾಣ ಹೆಚ್ಚಳಕ್ಕೆ ಎಲ್ಲರೂ ಮತದಾನ ಪ್ರಕ್ರಿಯೆಯಲ್ಲಿ ಭಾಗವಹಿಸಬೇಕು ಎಂದು ಹೇಳಿದರು.

ಇದೇ ಸಂದರ್ಭದಲ್ಲಿ ಸ್ಥಳದಲ್ಲಿ ನೆರೆದಿದ್ದ ಎಲ್ಲರೂ ಮತದಾನ ಪ್ರತಿಜ್ಞಾ ವಿಧಿ ಸ್ವೀಕರಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಲೆಕ್ಕಾಧಿಕಾರಿ ವಿನೋದ್, ಕಂಪ್ಲಿ ತಾಪಂ ಇಓ ಆರ್.ಕೆ.ಶ್ರೀಕುಮಾರ್, ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಸಹಾಯಕ ನಿರ್ದೇಶಕ ಮಲ್ಲನಗೌಡ, ಪಿಡಿಓ ಶ್ರೀಶೈಲ ಗೌಡ, ಕೆ.ಹನುಮಂತಪ್ಪ, ಟಿಸಿ ಸಂಗಮೇಶ, ಟಿಐಇಸಿ ಹನುಮೇಶ್ ಹಾಗಲೂರು ಹೊಸಳ್ಳಿ ಸೇರಿದಂತೆ ಇತರೆ ಅಧಿಕಾರಿಗಳು ಮತ್ತು ಕೂಲಿಕಾರ್ಮಿಕರು ಹಾಜರಿದ್ದರು.

# ವಿಶೇಷ ಚೇತನರಿಂದ ತ್ರಿಚಕ್ರ ವಾಹನದ ಮೂಲಕ ಮತದಾನ ಜಾಗೃತಿ




ಬಳ್ಳಾರಿ: ಮತದಾರರಲ್ಲಿ ಮತದಾನದ ಅರಿವು ಮೂಡಿಸುವ ನಿಟ್ಟಿನಲ್ಲಿ ಕುರುಗೋಡು ತಾಲ್ಲೂಕು ಸ್ವೀಪ್ ಸಮಿತಿ ಮತ್ತು ತಾಲ್ಲೂಕು ಆಡಳಿತ ಸಹಯೋಗದಲ್ಲಿ ಶನಿವಾರ ಮತದಾನ ಜಾಗೃತಿ ಅಂಗವಾಗಿ ವಿಶೇಷ ಚೇತನರ ಬೈಕ್ ರ್ಯಾಲಿ ಜರುಗಿತು.

ಬೈಕ್ ರ್ಯಾಲಿಗೆ ತಹಶೀಲ್ದಾರರಾದ ರೇಣುಕಾ ಅವರು ಚಾಲನೆ ನೀಡಿದರು. ಬಳಿಕ ಮಾತನಾಡಿದ ಅವರು, ವಿಶೇಷಚೇತನರಿಗೆ ಮತ ಚಲಾವಣೆಗೆ ಅನುಕೂಲವಾಗಲು ತಾಲೂಕಿನ ಎಲ್ಲ ಮತಗಟ್ಟೆಗಳಲ್ಲಿ ವ್ಹೀಲ್ ಚೇರ್ ಹಾಗೂ ರ್ಯಾಂಪ್ ವ್ಯವಸ್ಥೆ ಮಾಡಲಾಗಿದೆ ಎಂದರು.

ಲೋಕಸಭೆ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲರೂ ಕಡ್ಡಾಯವಾಗಿ ಮತ ಚಲಾಯಿಸಬೇಕು. ನಿಮ್ಮರಿಗೂ ತಪ್ಪದೇ ಮತದಾನ ಮಾಡಲು ತಿಳಿಸಬೇಕು ಎಂದರು.

ರ್ಯಾಲಿಯಲ್ಲಿ ಭಾಗವಹಿಸಿದ್ದ ವಿಶೇಷಚೇತನರು ಮತದಾನ ಜಾಗೃತಿಯ ಭಿತಿ ಪತ್ರಗಳನ್ನು ಪ್ರದರ್ಶಿಸಿ ಘೋಷಣೆಗಳನ್ನು ಕೂಗುವ ಮೂಲಕ ಮತದಾನ ಜಾಗೃತಿ ಮೂಡಿಸಿದರು.

ರ್ಯಾಲಿಯು ಪಟ್ಟಣದ ದೊಡ್ಡ ಬಸವೇಶ್ವರ ದೇವಸ್ಥಾನದಿಂದ ಆರಂಭವಾಗಿ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಬಳಿಕ ಪ್ರತಿಜ್ಞಾವಿಧಿ ಬೋಧಿಸಿದರು. ಈ ವೇಳೆ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯ ಪಿ.ಶಿವರಾಮರೆಡ್ಡಿ, ತಾಲ್ಲೂಕು ಯೋಜನಾಧಿಕಾರಿ ರಾಧಿಕಾ, ಸೇರಿದಂತೆ ತಾಲ್ಲೂಕು ಪಂಚಾಯತಿ ಅಧಿಕಾರಿಗಳು, ಸಿಬ್ಬಂದಿಯವರು ಹಾಗೂ ಇತರರು ಹಾಜರಿದ್ದರು.

# ಸಂಡೂರು: ವಿಕಲಾಂಗ ಚೇತನರಿಂದ ಮತದಾನ ಜಾಗೃತಿ




ಬಳ್ಳಾರಿ: ಮತದಾನ ಜಾಗೃತಿ ಮೂಡಿಸುವ ಕಾರ್ಯ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ಈ ಕಾರ್ಯದಲ್ಲಿ ಪಾಲ್ಗೊಂಡಿರುವ ವಿಕಲಾಂಗ ಚೇತನರ ಕಾರ್ಯ ಶ್ಲಾಘನೀಯ ಎಂದು ಸಂಡೂರು ವಿಧಾನಸಭಾ ಕ್ಷೇತ್ರ ಸಹಾಯಕ ಚುನಾವಣಾಧಿಕಾರಿ ಸತೀಶ್ ಅವರು ಹೇಳಿದರು.

ಲೋಕಸಭಾ ಸಾರ್ವತ್ರಿಕ ಚುನಾವಣೆ ಅಂಗವಾಗಿ ತಾಲ್ಲೂಕು ಸ್ವಿಪ್ ಸಮಿತಿ, ತಾಲ್ಲೂಕು ಆಡಳಿತ ವತಿಯಿಂದ ಶನಿವಾರ ಏರ್ಪಡಿಸಲಾಗಿದ್ದ ವಿಕಲಚೇತನರ ಯಂತ್ರಚಾಲಿತ ತ್ರಿಚಕ್ರ ವಾಹನ (ಬೈಕ್) ಮತದಾನ ಜಾಗೃತಿ ಜಾಥಕ್ಕೆ ಹಸಿರು ಬಾವುಟ ಹಾರಿಸುವುದರ ಮೂಲಕ ಚಾಲನೆ ನೀಡಿ ಮಾತನಾಡಿದರು.

ಸುಭದ್ರ ದೇಶದ ಭವಿಷ್ಯಕ್ಕಾಗಿ ಪ್ರಜೆಗಳೇ ಪ್ರಭುಗಳು ಆಗಿದ್ದು, ಪ್ರಜೆಗಳು ಯಾವುದೆ ಆಮೀಷಕ್ಕೆ ಒಳಗಾಗದೆ ಮತದಾನ ಮಾಡಿ ಎಂದು ಹೇಳಿದರು.

ತಾಲೂಕು ಪಂಚಾಯತಿ ಕಾರ್ಯ ನಿರ್ವಾಹಕ ಅಧಿಕಾರಿ ಹಾಗೂ ತಾಲ್ಲೂಕು ಸ್ವಿಪ್ ಸಮಿತಿಯ ಅಧ್ಯಕ್ಷರಾದ ಷಡಕ್ಷರಯ್ಯ ಅವರು ಮಾತನಾಡಿ, ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಎಲ್ಲರೂ ತಪ್ಪದೇ ಮತಚಲಾಯಿಸಿ ಹಾಗೂ ವಿಕಲಚೇತನರು ಸಹ ತಪ್ಪದೇ ಮತಗಟ್ಟೆಗೆ ಬಂದು ಮತ ಚಲಾಯಿಸಲು ಸೌಕರ್ಯ ಕಲ್ಪಿಸಲಾಗಿದೆ ಎಂದರು.

ರ್ಯಾಂಪ್ಸ್, ರೈಲಿಂಗ್ ವ್ಹೀಲ್ ಚೇರ್, ಬೂತ್ ಕನ್ನಡಿ, ವಿಕಲಚೇತನ-ರಿಗೆ ಸಾರಿಗೆ ವ್ಯವಸ್ಥೆ ಶೌಚಾಲಯ ವ್ಯವಸ್ಥೆ ಮಾಡಲಾಗಿದ್ದು, ಮನೆಯಿಂದ ಬಂದು ಮತ ಹಾಕದೆ ಇರುವವರಿಗೆ 12 ಡಿ ನಮೂನೆ ವಿತರಿಸಿ ಮತಹಾಕುವ ವ್ಯವಸ್ಥೆಯನ್ನು ಮಾಡಲಾಗಿದೆ. ಯಾರು ಕೂಡ ಮತದಾನದಿಂದ ವಂಚಿತರಾಗಬಾರದು ಎಂದು ತಿಳಿಸಿದರು ಎಂದರು.

ಬಳಿಕ ಎಲ್ಲರೂ ಮತದಾನದ ಪ್ರತಿಜ್ಞಾವಿಧಿ ಸ್ವೀಕ-ರಿಸಿದರು.

ಈ ಸಂದರ್ಭದಲ್ಲಿ ಪುರಸಭೆ ಮುಖ್ಯಾಧಿಕಾರಿ ಜಯಣ್ಣ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಳೆ ನಾಗಪ್ಪ, ಸಹಾಯಕ ನಿರ್ದೇಶಕ ವೆಂಕಟೇಶ್, ವಿಕಲಚೇತನರ ವಿಭಾಗದಿಂದ ಎಂಆರ್ಡಬ್ಲ್ಯೂ ಸಿ.ಕರಿಬಸಜ್ಜ ಹಾಗೂ ಎಲ್ಲಾ ವಿಆರ್ಡಬ್ಲ್ಯೂ ಮತ್ತು ಯುಆರ್ಡಬ್ಲ್ಯೂ ಕಾರ್ಯಕರ್ತರು ಭಾಗವಹಿಸಿದ್ದರು.

ಜಾಗೃತಿ ಜಾಥಾವು ತಾಲ್ಲೂಕು ಪಂಚಾಯಿತಿ ಆವರಣದಿಂದ ಆರಂಭವಾಗಿ ವಿಜಯ ಸರ್ಕಲ್, ಕೃಷ್ಣಾನಗರ ಗ್ರಾಮದ ಬಿಕೆಜಿ ಶಾಲೆ, ಪುರಸಭೆ, ಬಸ್ ನಿಲ್ದಾಣದ ಕೆಎಸ್ಆರ್ಟಿಸಿ ಬಸ್ ಡಿಪೋ ಮಾರ್ಗವಾಗಿ ಅರಣ್ಯ ಇಲಾಖೆ ಕಚೇರಿವರೆಗೆ ತಲುಪಿ ಮರಳಿ ಪುರಸಭೆ ಬಸ್ ನಿಲ್ದಾಣದಿಂದ ತಾಲ್ಲೂಕು ಪಂಚಾಯತ್ ಆವರಣದಲ್ಲಿ ಕೊನೆಗೊಂಡಿತು.

# ಕಪ್ಪೆಯನ್ನು ತಕ್ಕಡಿಯಲ್ಲಿಟ್ಟು ತೂಗಿದಂತೆ

ಮನಸ್ಸೆನ್ನುವ ಮಾಯಾವಿಯನ್ನು ಯಾವ-ರೀತಿಯಾಗಿ ಪಳಗಿಸಬೇಕು ಎನ್ನುವುದೆ ಎಲ್ಲರಿಗೂ ಯಕ್ಷಪ್ರಶ್ನೆ?. ಚಂಚಲವಾದ ಈ ಮನಸಿನ ಬಗ್ಗೆ ಹೇಳುವುದು ಅಷ್ಟು ಸುಲಭದ ಮಾತಲ್ಲ. ಇದು ವಿಚಿತ್ರ ಹಾಗೂ ಕಲ್ಪನಾತೀತ. ಒಮ್ಮೆ ಅಲ್ಲೋಲ ಕಲ್ಲೋಲ ಮತ್ತೊಮ್ಮೆ ಹರುಷದಿ ಕುಣಿದಾಡುವ ರೂಪಾಂತರಿ. ಆಲೋಚನೆಗೂ ಮೀರಿದ ಈ ಮನಸು ಊಹಿಸುವುದು ಬಹಳ ಕಷ್ಟ.

ಹಾಗಾಗಿ ಮನಸ್ಸನ್ನು ಯಾವಾಗಲೂ ಹು-ರಿದುಂಬಿಸಿ ಖುಷಿಯಿಂದ ಹುರುಪಿನಿಂದ ಇಟ್ಟುಕೊಳ್ಳಲು ಯಾವ ಬಗೆಯ ಹವ್ಯಾಸಗಳನ್ನು ರೂಢಿಸಿಕೊಳ್ಳಬೇಕು ಎನ್ನುವುದು ಬಹಳ ಮುಖ್ಯ. ಉತ್ತಮ ಹವ್ಯಾಸ ಬೆಳೆಸಿಕೊಂಡವರಿಗೆ ಎಂದಿಗೂ ವಯಸ್ಸಿನ ಪರಿವೆ ಇರುವುದಿಲ್ಲ, ತಮ್ಮ ಕೆಲಸಕಾರ್ಯದಲ್ಲಿಯೇ ನೆಮ್ಮದಿ ಕಂಡುಕೊಳ್ಳುವರು ಅವರ ಮುಖದ ಕಾಂತಿ, ಒಂದಿಷ್ಟು ಸಾಧನೆಯ, ಆತ್ಮತೃಪ್ತಿಯ ಬದುಕೆ ಅವರ ಲವಲವಿಕೆಗೆ ಕಾರಣ.



-ಕಸ್ತೂರಿ ಡಿ ಪತ್ತಾರ
ಬೆಂಗಳೂರು

ಮನಸ್ಸೆಂಬುದು ಕಪ್ಪೆಯನ್ನು ತಕ್ಕಡಿಯಲ್ಲಿ ತೂಕಮಾಡಿದಂತೆ, ಒಂದು ಕ್ಷಣವೂ ನಿಲ್ಲದ ಓಟ ಅತಿವೇಗವಾಗಿ ಓಡುವ ಮನಸ್ಸನ್ನ ತಡೆಯಲು ಎಂಥವರಿಗೂ ಕಷ್ಟದ ಮಾತಾಗಿದೆ, ಅದನ್ನು ಸ್ವಲ್ಪ ಸ್ವಲ್ಪ ನಿಧಾನವಾಗಿ ಸಹನೆಯಿಂದ ಹಿಡಿತದಲ್ಲಿ ಹಿಡಿದಿಡುವ ಬಗೆಯನ್ನು ನಮಗೆ ನಾವೆ ಅರಿತುಕೊಳ್ಳಬೇಕು. ಸಣ್ಣತನದ ಸ್ನೇಹದಿಂದ ದೂರವಿರುವುದರಿಂದ ಮನಸ್ಸಿನ ಒತ್ತಡ ಕಡಿಮೆಯಾಗುವುದು. ಸಮಾನ ಮನಸ್ಕರ ಸುಸ್ಪಂದನೆ ಜೊತೆಗೆ ಭಾವ ವಿಹಾ-ರಿಯಾಗಿ ಬದುಕನ್ನ ಪ್ರೀತಿಸುತ್ತ ಜಾಣ್ಮೆ ತಾಳ್ಮೆ ಕಲಿತರೆ ಸಾಕು. ಮನಸಿನ ಹೊಯ್ದಾಟದಿಂದ ಚೂರು ಮುಕ್ತವಾಗಬಹುದು.

ಒತ್ತಡವಿಲ್ಲದ ಬದುಕೆಲ್ಲಿದೆ? ಈ ಮಧ್ಯೆಯೂ ನಮ್ಮ ಬದುಕಿನ ಸೂಕ್ಷ್ಮತೆಯನ್ನು ಅರಿತು ನಮ್ಮ ಮನಸ್ಸನ್ನ ಪ್ರಭಾವಗೊಳಿಸುವ ವಿಷಯದ ಬಗ್ಗೆ ಗಮನಹರಿಸಿ ಇಂದಿನ ಕೆಲಸ ಯಾವುದು ಬಹುಮುಖ್ಯ, ಯಾವುದು ಎನ್ನವುದು ತಿಳಿದು ಅದರ ಬಗ್ಗೆ ಹೆಚ್ಚು ಏಕಾಗ್ರತೆ ವಹಿಸಬೇಕು. ನಮ್ಮ ಕೃತ್ಯ ಕೇವಲ ನಮ್ಮ ಮನಕೆ ಹಿತವಾದರೆ ಸಾಲದು ಅದು ಮತಿಗೂ ಮಂದಿಗೂ ಹಿತವಾಗಿರಬೇಕು ಆ ದಿಶೆಯಲ್ಲಿ ನಮ್ಮ ಹಾದಿ ಇರಬೇಕು. ಹಿಂದೆ ಮಾಡಿದ ಉತ್ತಮ ಕೆಲಸವನ್ನು ಮೆಲುಕುಹಾಕುತ್ತ ಮನಕೆ ಉತ್ಸಾಹ ತಂದುಕೊಂಡು, ಮುಂದೆಮಾಡುವ ಕೆಲಸದ ಬಗ್ಗೆ ಸುಂದರ ಕನಸನ್ನು ಹೊತ್ತು ಸಾಗಬೇಕು.

ಹಾಗೆ ದಿನದ ಪ್ರಾರಂಭವನ್ನು ಒಂದು ಸುಂದರ ಸೂರ್ಯೋದಯ ದಂತೆ, ಪ್ರಶಾಂತ ತೇಜದಿ ಪ್ರಜ್ವಲಿಸುವ ಬೆಳಕಂತೆ, ಪ್ರಭಾವಿಸುವ ವಿಷಯ ಹಾಗೂ ಬದುಕಿಗೆ ಸಂಬಂಧಿಸಿದ ಕೆಲಸ ಕಾರ್ಯಗಳನ್ನು ಶುರುಮಾಡಬೇಕಾದರೆ ನಾವು ಮನದೊಡೆಯರಾಗಬೇಕು. ಮನಸ್ಸೆನ್ನುವ ಮಾಯಾವಿ ರೋಗವನ್ನು ಸೃಷ್ಟಿಸಲೂ ಬಹುದು ಹಾಗೆ ಗುಣಪಡಿಸಲು ಬಹುದು, ತಾಳ್ಮೆ ಪ್ರೀತಿ ನಿಸ್ವಾರ್ಥ-ರ್ಫ ಸೇವಾ ಮನೋಭಾವ, ರಚನಾತ್ಮಕ ಭಾವನೆಗಳು ಆರೋಗ್ಯಕರ ಚಟುವಟಿಕೆಗೆ ಕಾರಣವಾಗುತ್ತವೆ, ಉತ್ಸಾಹವೆ ಆತ್ಮಶಕ್ತಿ, ಉತ್ಸಾಹದಿಂದ ಮಾಡುವ ಎಂತಹ ದೊಡ್ಡ ಕೆಲಸವು ಅಸಾಧ್ಯ ಅನಿಸುವುದಿಲ್ಲ. ಶರೀರ ಬಲ, ಆತ್ಮಬಲ ಮನೋಬಲ ಇದ್ದವರು ಏನನ್ನಾದರೂ ಸಾಧಿಸಬಹುದು ಇದೆಲ್ಲಕ್ಕೂ ಕಾರಣ ಮನಸೇ ಅಲ್ಲವೆ?

# ಬಡಜನರ ಜೀವನಾಡಿ, ಗ್ರಾಹಕ-ಸದಸ್ಯರಿಗೆ ವರದಾನ: ಮುನ್ನೋಳಿ

ಹುಕ್ಕೇರಿ: ಈ ಭಾಗದ ಜನರ ಆರ್ಥಿಕ ಸುಧಾರಣೆ ಸದುದ್ದೇಶದಿಂದ ಜನ್ಮ ತಳೆದ ಹುಕ್ಕೇರಿ ತಾಲೂಕಿನ ಸಾರಾಪುರ ಶಾಂತಿನಾಥ ಕ್ರೆಡಿಟ್ ಸೌಹಾರ್ದ ಸಹಕಾರಿ ಇಂದು ಪ್ರಗತಿ ಪಥದತ್ತ ಸಾಗಿದ್ದು ಕಳೆದ ಆರ್ಥಿಕ ವರ್ಷದಲ್ಲಿ 31 ಲಕ್ಷ ರೂ ನಿವ್ವಳ ಲಾಭ ಗಳಿಸಿದೆ ಎಂದು ಬ್ಯಾಂಕ್ ಅಧ್ಯಕ್ಷ ವೃಷಭ ಮುನ್ನೋಳಿ ಹೇಳಿದರು.



ಬ್ಯಾಂಕ್‌ನ ಪ್ರಧಾನ ಕಚೇರಿಯಲ್ಲಿ ಶುಕ್ರವಾರ ಆಡಳಿತ ಮಂಡಳಿ ಸಭೆ ಬಳಿಕ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಆಧುನಿಕ ಸೌಲಭ್ಯಗಳೊಂದಿಗೆ ಗ್ರಾಹಕ-ಸದಸ್ಯರಿಗೆ ತ್ವರಿತಗತಿಯಲ್ಲಿ ಸೇವೆ ಸಲ್ಲಿಸಲಾಗುತ್ತಿದೆ. ಈ ಮೂಲಕ ಬ್ಯಾಂಕ್ ಅಲ್ಪ ಅವಧಿಯಲ್ಲೇ ಪ್ರಗತಿಯತ್ತ ಸಾಗಿ ಜನಸ್ನೇಹಿ ಆಡಳಿತಕ್ಕೆ ಹೆಸರುವಾಸಿಯಾಗಿದೆ ಎಂದರು.

ಸಹಕಾರಿಯು ಒಟ್ಟು 992 ಜನ ಸದಸ್ಯರನ್ನು ಹೊಂದಿದ್ದು ಪ್ರಧಾನ ಕಚೇರಿ ಸೇರಿ ಒಟ್ಟು 3 ಶಾಖೆಗಳಿವೆ. ಒಟ್ಟು 72 ಕೋಟಿ ರೂ ವಹಿವಾಟು ನಡೆಸಿದ್ದು 11 ಲಕ್ಷ ಶೇರು ಬಂಡವಾಳವಿದೆ.

1 ಕೋಟಿ ಕಾಯ್ದಿಟ್ಟ ಹಾಗೂ ಇತರೆ ನಿಧಿಗಳಿದ್ದು 15 ಕೋಟಿ ದುಡಿಯುವ ಬಂಡವಾಳವಿದೆ. 10 ಕೋಟಿ ರೂ ಸಾಲ ವಿತರಿಸಲಾಗಿದ್ದು 13 ಕೋಟಿ ರೂ ಠೇವುಗಳಿವೆ. 3.90 ಕೋಟಿ ಗುಂತಾವಣೆಗಳಿದ್ದು ಕಳೆದ ಆರ್ಥಿಕ ವರ್ಷದ 31 ಮಾರ್ಚ್ 2024ರವರೆಗೆ ಸುಮಾರು 31.89 ಲಕ್ಷ ರೂ ನಿವ್ವಳ ಲಾಭ ಗಳಿಸಿದೆ ಎಂದು ಅವರು ವಿವರಿಸಿದರು.

ಪ್ರಧಾನ ಕಾರ್ಯದರ್ಶಿ ಸುರೇಶ ಹೆಬ್ಬಾಳ ಮಾತನಾಡಿ, ಶೇ.99 ರಷ್ಟು ಸಾಲ ವಸೂಲಾತಿಯಾಗಿದ್ದು ಶೇ.15 ರಷ್ಟು ಲಾಭಾಂಶ ವಿತರಿಸಲಾಗಿದೆ. ಗ್ರಾಹಕ ಸದಸ್ಯರು-ಆಡಳಿತ ಮಂಡಳಿ ಸಿಬ್ಬಂದಿ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ.

ಹಾಗಾಗಿ ಅನೇಕ ಗ್ರಾಹಕ ಸ್ನೇಹಿ ಯೋಜನೆಗಳನ್ನು ಜಾರಿಗೊಳಿಸಿದೆ. ಸಿಬ್ಬಂದಿಗಳ ದಕ್ಷ, ಪ್ರಾಮಾಣಿಕ ಸೇವೆಯಿಂದ ಬ್ಯಾಂಕ್ ಪ್ರಗತಿಯತ್ತ ಸಾಗಿದೆ. ಸಹಕಾರಿ ಕ್ಷೇತ್ರದೊಂದಿಗೆ ಶೈಕ್ಷಣಿಕ, ಸಾಮಾಜಿಕ ರಂಗದಲ್ಲಿಯೂ ಸೇವೆ ಸಲ್ಲಿಸುವ ಚಿಂತನೆ ನಡೆಸಲಾಗಿದೆ ಎಂದರು.

ಉಪಾಧ್ಯಕ್ಷ ಪುಟ್ಟು ಚೌಗಲಾ, ನಿರ್ದೇಶಕರಾದ ತವನಪ್ಪಾ ಹೆಬ್ಬಾಳ, ಅಣ್ಣಪ್ಪಾ ತಂಗಡಿ, ಪಾರೇಶ ಹೆಬ್ಬಾಳ, ರಾಮಗೌಡ ಪಾಟೀಲ, ಅಜೀತ ಕಲ್ಮಣಿ, ನಿಂಗಪ್ಪಾ ಮುನ್ನೋಳಿ, ಹಣಮಂತ ಮಗದುಮ್ಮ, ಸಿದ್ಧಪ್ಪ ಸನದಿ, ಸಂತೋಷ ಚೌಗಲಾ, ನಮ್ರತಾ ದೇವನ್ನವರ, ಸವಿತಾ ಹೆಬ್ಬಾಳ, ಪ್ರಧಾನ ಕಾರ್ಯದರ್ಶಿ ಸುರೇಶ ಹೆಬ್ಬಾಳ ಮತ್ತಿತರರು ಉಪಸ್ಥಿತರಿದ್ದರು.

# ಮತಗಟ್ಟೆ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ತರಬೇತಿ ಕಾರ್ಯಾಗಾರ

## ಯಾವುದೇ ಗೊಂದಲಗಳಿಗೆ ಅವಕಾಶ ನೀಡದೇ ಮತದಾನ ಕಾರ್ಯ ಯಶಸ್ವಿಗೊಳಿಸಿ: ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್

ಬಳ್ಳಾರಿ: ಚುನಾವಣೆಯ ಮಾರ್ಗಸೂಚಿಗಳನ್ನು ಸರಿಯಾಗಿ ತಿಳಿದುಕೊಂಡು ಅಚ್ಚುಕಟ್ಟಾಗಿ ಮತ್ತು ಪ್ರಾಮಾಣಿಕತೆಯಿಂದ ಮತದಾನ ಕಾರ್ಯ ಪೂರ್ಣಗೊಳಿಸಬೇಕು. ಯಾವುದೇ ಆತುರಕ್ಕೆ ಒಳಗಾಗದೇ ಸಮಚಿತ್ತರಾಗಿ ತರಬೇತಿಯನ್ನು ಪಡೆಯುವ ಮೂಲಕ ಮತದಾನ ಗೊಂದಲಗಳನ್ನು ನಿವಾರಿಸಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರು ಪಿಆರ್‌ಓ, ಎಪಿಆರ್‌ಓ, ಪಿಓ ಅಧಿಕಾ-ರಿಗಳಿಗೆ ತಿಳಿಸಿದರು.

ಅವರು ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ನಗರದ ಕೋಟೆ ಪ್ರದೇಶದ ಸೆಂಟ್ ಜೋಸೆಫ್ ಶಾಲೆಯಲ್ಲಿ ಬಳ್ಳಾರಿ ನಗರ ವಿಧಾನಸಭೆ ಕ್ಷೇತ್ರಕ್ಕೆ ನಿಯೋಜನೆಗೊಂಡ ಮತಗಟ್ಟೆ ಅಧಿಕಾರಿಗಳು ಮತ್ತು ಸಿಬ್ಬಂದಿಗಳಿಗೆ ಶುಕ್ರವಾರದಂದು ಹಮ್ಮಿಕೊಂಡಿದ್ದ ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿ ಅವರು ಮತನಾಡಿದರು.

ಮತಯಂತ್ರವನ್ನು ಹೇಗೆ ನಿರ್ವಹಣೆ ಮಾಡಬೇಕು, ನಮೂನೆಗಳನ್ನು ಹೇಗೆ ಭರ್ತಿ ಮಾಡಬೇಕು, ಮತದಾನಕ್ಕೂ ಮುನ್ನ ಯಾವೆಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಬೇಕು, ಯಾವ ಹಂತದಲ್ಲಿ ಎಚ್ಚರಿಕೆ ವಹಿಸಬೇಕು ಮತ್ತು ಮತದಾರರೊಂದಿಗೆ ಹೇಗೆ ವರ್ತನೆ ಮಾಡಬೇಕು ಮುಂತಾದ ವಿಷಯಗಳನ್ನು ತರಬೇತಿಯ ವೇಳೆ ತಿಳಿದುಕೊಳ್ಳಬೇಕು ಎಂದು ಹೇಳಿದರು.



ಚುನಾವಣಾ ಕರ್ತವ್ಯ ನಿರ್ವಹಣೆ, ಮಸ್ಟರಿಂಗ್ ಪ್ರಕ್ರಿಯೆ ಮತ್ತು ಸಂಬಂಧಿತ ಚಟುವಟಿಕೆಗಳು, ಮತಗಟ್ಟೆಗಳಲ್ಲಿ ಇವಿಎಂಗಳ ವ್ಯವಸ್ಥೆ, ಮತದಾನ ಪ್ರಕ್ರಿಯೆ, ಬೂತ್ಗಳಲ್ಲಿ ಪೋಲಿಂಗ್ ಏಜೆಂಟರ ನಿರ್ವಹಣೆ ಕುರಿತು ಮಾಹಿತಿ ನೀಡಿದ ಅವರು, ಮತದಾನಕ್ಕೂ ಮುನ್ನ ಮತದಾರರು ಸಲ್ಲಿಸಿದ ದಾಖಲೆಗಳನ್ನು ಪಿಆರ್‌ಓಗಳು, ಎಪಿಆರ್‌ಓಗಳು ಮತ್ತು ಸಿಬ್ಬಂದಿಗಳು ಪರಿಶೀಲನೆ ನಡೆಸಬೇಕು ಎಂದರು.

ಮತದಾನ ಪ್ರಕ್ರಿಯೆ ಮತ್ತು ಎಲ್ಲಾ ಇತರ ಮತದಾನ ಸಂಬಂಧಿತ ಚಟುವಟಿಕೆಗಳ ಕುರಿತು ಪಿಪಿಟಿ ಪ್ರಸ್ತುತಿ ಮತ್ತು ಮತಯಂತ್ರಗಳು, ಇವಿಎಂ, ವಿವಿಪ್ಯಾಟ್ಗಳ ಕಾರ್ಯನಿರ್ವಹಣೆಯ ಪ್ರಾಯೋಗಿಕ ಪ್ರಾತ್ಯಕ್ಷಿಕೆ ಸಹ ಕಾರ್ಯಾಗಾರದಲ್ಲಿ ನೀಡಲಾಗುತ್ತದೆ. ಸರಿಯಾಗಿ ಅರ್ಥೈಸಿಕೊಳ್ಳಬೇಕು ಎಂದರು.

ಮತದಾನ ಕಾರ್ಯ ವಿಧಾನ ಮತ್ತು ನಮೂನೆಗಳನ್ನು ಭರ್ತಿ ಮಾಡಲು, ಅನುಬಂಧಗಳನ್ನು ಓದಲು ಪ್ರಾಮುಖ್ಯತೆ ನೀಡಬೇಕು. ಇವಿಎಂ ಮತ್ತು ವಿವಿಪ್ಯಾಟ್ ಬಳಕೆ, ಮತಗಟ್ಟೆ ಸ್ಥಾಪನೆ, ಮತದಾರರಿಗೆ ಮತದಾನ ವಿಭಾಗದ ವ್ಯವಸ್ಥೆ, ಅಣಕು ಮತದಾನ ನಡೆಸುವುದು ಮತ್ತು ಹಿರಿಯ ನಾಗ-ರಿಕರು ಮತ್ತು ಅಂಗವಿಕಲ ಮತದಾರ-ರಿಗೆ ಸೌಲಭ್ಯ ಒದಗಿಸುವ ಕುರಿತು ಪ್ರಾತ್ಯಕ್ಷಿಕೆ ನೀಡಲಾಗುವುದು ಎಂದರು.

ಮತದಾನ ಸಿಬ್ಬಂದಿ ತಮಗೆ ನೀಡಲಾದ ಮಾರ್ಗಸೂಚಿಗಳನ್ನು ಸರಿಯಾಗಿ ಅರ್ಥೈಸಿಕೊಂಡು ಕರ್ತವ್ಯ ನಿರ್ವಹಿಸಬೇಕು. ಚುನಾವಣಾ ಆಯೋಗವು ನೀಡಿರುವ ಎಲ್ಲಾ ಮಾರ್ಗಸೂಚಿಗಳನ್ನು ಪಾಲನೆ ಮಾಡಬೇಕೆಂದರು.

ಮತದಾನ ಪ್ರಕ್ರಿಯೆ ಬಗ್ಗೆ ಯಾವುದೇ ಗೊಂದಲ ಉಂಟಾಗದಂತೆ ಯಶಸ್ವಿಯಾಗಿ ನಡೆಸಲು ಚುನಾವಣಾ ಕರ್ತವ್ಯದಲ್ಲಿ ಪಾಲ್ಗೊಳ್ಳುವ ಅಧಿಕಾ-ರಿಗಳು ಮತ್ತು ಸಿಬ್ಬಂದಿಗಳಿಗೆ ವಿವಿಧ ಹಂತಗಳಲ್ಲಿ ತರಬೇತಿ ನೀಡಲಾಗುತ್ತಿದೆ ಎಂದರು.

ಲೋಕಸಭಾ ಸಾರ್ವತ್ರಿಕ ಚುನಾವಣೆಯನ್ನು ಯಶಸ್ವಿಯಾಗಿ ನಡೆಸಲು ಈಗಾಗಲೇ ಪೂರ್ವ ತಯಾರಿಗಳನ್ನು ವಿವಿಧ ಇಲಾಖೆಗಳ ಸಹಕಾರದೊಂದಿಗೆ ಕೈಗೊಂಡಿದ್ದು, ಮತದಾನ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳುವ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಚುನಾವಣಾ ಆಯೋಗದ ನಿರ್ದೇಶನದಂತೆ ಅನುಸರಿಸಬೇಕಾದ ಕ್ರಮಗಳ ಬಗ್ಗೆ ತರಬೇತಿ ಹೊಂದಬೇಕು ಎಂದರು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್ ಸೇರಿದಂತೆ ಪಿಆರ್‌ಓ, ಎಪಿಆರ್‌ಓ, ಪಿಓ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಕೇಂದ್ರದಿಂದ ಕರ್ನಾಟಕಕ್ಕೆ ಮಲತಾಯಿ ಧೋರಣೆ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

ವಡ್ಡೇರಹಟ್ಟಿ (ಅರಭಾವಿ): ಕೇಂದ್ರದ ಬಿಜೆಪಿ ಸರ್ಕಾರ ಕಳೆದ 10 ವರ್ಷಗಳಿಂದ ಕರ್ನಾಟಕಕ್ಕೆ ಮಲತಾಯಿ ಧೋರಣೆಯನ್ನು ಅನುಸರಿಸುತ್ತಾ ಬಂದಿದ್ದು, ಬಡ ಜನರಿಗೆ ನೀಡಲಾಗುವ ಅಕ್ಕಿ ವಿಚಾರದಲ್ಲೂ ರಾಜಕೀಯ ಮಾಡಿತು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

ಅರಭಾವಿ ವಿಧಾನಸಭಾ ಕ್ಷೇತ್ರದ ವಡ್ಡೇರಹಟ್ಟಿಯಲ್ಲಿ ಶನಿವಾರ ನಡೆದ ಜಿಲ್ಲಾ ಪಂಚಾಯತ್ ಸಮ್ಮಿಲನ ಸ್ವಾಭಿಮಾನಿ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಸಚಿವರು, ಅಕ್ಕಿ ಕೊಡುವ ವಿಷಯದಲ್ಲೂ ಕೇಂದ್ರ ರಾಜಕೀಯ ಮಾಡಿತು. ಕೇಂದ್ರ ಸರ್ಕಾರ ಏನಿದ್ದರೂ ಶ್ರೀಮಂತರ ಪರ. ಅಂಬಾನಿ, ಅದಾನಿ ಅವರ ಸಾಲ ಮನ್ನಾ ಮಾಡುವ ಮೂಲಕ ಶ್ರೀಮಂತರ ಪರ ಎಂದು ನಿರೂಪಿಸಿದೆ. ಬಡವರ ಬಗ್ಗೆ ಸ್ವಲ್ಪವೂ ಕಾಳಜಿ ಹೊಂದಿಲ್ಲ ಎಂದು ಸಚಿವರು ಟೀಕಿಸಿದರು.

**ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಬೆಂಬಲಿಸಿ:**

ಕಾಂಗ್ರೆಸ್ ಪಕ್ಷ ಎಂದರೆ ಬದ್ಧತೆ, ನುಡಿದಂತೆ ನಾವು ನಡೆದಿದ್ದೇವೆ. ಚುನಾವಣೆಗೂ ಮುನ್ನ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಅಧಿಕಾರಕ್ಕೆ ಬಂದ ಕೇವಲ 100 ದಿನಗಳಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಜಾರಿಗೊಳಿಸಿದರು. ಸಿದ್ದರಾಮಯ್ಯನವರಿಗೆ ಇರುವ ಬಡವರ ಪರ ಕಾಳಜಿಯೇ ಇದಕ್ಕೆ ಸಾಕ್ಷಿ ಎಂದರು.

ನನ್ನ ಮಗ ಮೃಣಾಲ್ ಹೆಬ್ಬಾಳ್ಕರ್ ಅವರ ವಿಚಾರಧಾರೆಗಳು ತುಂಬಾ ದೊಡ್ಡದಿದೆ. ನನ್ನ ಹಾಗೆಯೇ ನನ್ನ ಮಗ ಕೂಡ ಬದ್ಧತೆ ಹೊಂದಿದ್ದಾನೆ. ತಾಯಿಯಂತೆ ಮಗ ಕೂಡ ಅಭಿವೃದ್ಧಿಯ ಬಗ್ಗೆ ದೊಡ್ಡ ಚಿಂತನೆ ಹೊಂದಿದ್ದಾನೆ. ಒಂದು ಬಾರಿ ಮೃಣಾಲ್‌ಗೆ ಆಶೀರ್ವಾದ ಮಾಡಬೇಕು ಎಂದು ಮನವಿ



ಮಾಡಿದರು. ಧರ್ಮದ ಹೆಸರಿನಲ್ಲಿ ರಾಜಕೀಯ ಮಾಡದೆ, ಧರ್ಮದಿಂದ ರಾಜಕೀಯ ಮಾಡುತ್ತಿದ್ದೇವೆ ಎಂದು ಹೇಳಿದರು.

**ಜಗದೀಶ್ ಶೆಟ್ಟರ್ ವಿರುದ್ಧ ಕಿಡಿ:**

ಮುಖ್ಯಮಂತ್ರಿ ಆದ ಮೇಲೂ ಕ್ಯಾಬಿನೆಟ್ ಮಂತ್ರಿಯಾದ ಶೆಟ್ಟರ್, ನಿಜಕ್ಕೂ ಸ್ವಾರ್ಥ ರಾಜಕಾರಣಿ. ಇಲ್ಲಿಗೆ ಬಂದು ಮತ ಕೇಳಲು ಅವರಿಗೆ ನೈತಿಕತೆ ಇಲ್ಲ. ಮನೆ ಮಗ ಮೃಣಾಲ್ ಅವರನ್ನು ಬೆಂಬಲಿಸಿ. ಈ ಭಾಗದಿಂದ ಹೆಚ್ಚು ಮತಗಳ ಮುನ್ನಡೆಯ ನಿರೀಕ್ಷೆಯಲ್ಲಿದ್ದೇವೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು.

**ಟೇಬಲ್ ಕುಟ್ಟಿ ಕೇಳುವೆ ಎಂದ ಮೃಣಾಲ್ ಹೆಬ್ಬಾಳ್ಕರ್**

ಬೆಳಗಾವಿ ಅಭಿವೃದ್ಧಿಗೆ ನನ್ನದೇ ಆದ ಕನಸುಗಳಿವೆ. ನಾನು ಸಂಸದನಾದರೆ ನಮ್ಮ ಜಿಲ್ಲೆಗೆ ಆಗಿರುವ ಅನ್ಯಾಯದ ವಿರುದ್ಧ ಧ್ವನಿ ಎತ್ತುವೆ. ನಮಗೆ ಬೇಕಾದ ಕೆಲಸ ಮಾಡಿಸಿಕೊಳ್ಳಲು ಟೇಬಲ್ ಕುಟ್ಟಿ ಕೇಳುವೆ ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಹೇಳಿದರು. ನಮಗೆ ಬರಬೇಕಾದ ಅನುದಾನ ಕೇಳಲು ನಾನು ಹಿಂಜರಿಯುವುದಿಲ್ಲ. ನಮ್ಮ ಜಿಲ್ಲೆಗೆ ಕೈಗಾರಿಕೆಗಳು, ಸಾಫ್ಟ್‌ವೇರ್ ಕಂಪನಿಗಳು ಬರಬೇಕು. ಇದಕ್ಕೆ ನಾನು ಹೋರಾಟ ಮಾಡಲು ಸಿದ್ಧ ಎಂದು ಮೃಣಾಲ್ ಹೇಳಿದರು

**ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಮಾಲಾರ್ಪಣೆ**

ವಡ್ಡೇರಹಟ್ಟಿ ಗ್ರಾಮದ ಮುಖ್ಯ ರಸ್ತೆಯಲ್ಲಿರುವ ಸಂಗೊಳ್ಳಿ ರಾಯಣ್ಣ ಪ್ರತಿಮೆಗೆ ಮೃಣಾಲ ಹೆಬ್ಬಾಳಕರ್ ಮಾಲಾರ್ಪಣೆ ಮಾಡಿದರು. ಬಳಿಕ ತೆರೆದ ವಾಹನದಲ್ಲಿ ಮೆರವಣಿಗೆ ಮೂಲಕ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹಾಗೂ ಮೃಣಾಲ್ ಹೆಬ್ಬಾಳ್ಕರ್ ಅವರನ್ನು ಕಾರ್ಯಕ್ರಮ ನಡೆಯುವ ಸ್ಥಳದವರೆಗೆ ಕರೆ ತರಲಾಯಿತು.

ಸಮಾರಂಭದಲ್ಲಿ ಮುಖಂಡರಾದ ಅನಿಲ್ ಕುಮಾರ್ ದೇಸಾಯಿ, ಭೀಮಪ್ಪ ಹಂದಿಗುಂದ್, ರಮೇಶ ಉಟಗಿ, ಲಕ್ಕಣ್ಣ ಸವಸುದ್ದಿ, ಕೌಜಲಗಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಪ್ರಕಾಶ್ ಅರಳಿ, ಸುರೇಶ್ ಮಗದುಮ್, ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕಾರ್ತಿಕ್ ಪಾಟೀಲ್, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಲಗಮಣ್ಣ ಕಳಸನವರ್, ಜಿಲ್ಲಾ ಕಾಂಗ್ರೆಸ್ ಕಿಸಾನ್ ಮೋರ್ಚಾದ ಅಧ್ಯಕ್ಷ ಕಲ್ಲಪ್ಪ ಗೌಡ ಲಕ್ಕಾರ್, ಬಸವರಾಜ ಹುಡೇದ್ ಸೇರಿದಂತೆ ಗ್ರಾಮದ ಹಲವು ಮುಖಂಡರು ಉಪಸ್ಥಿತರಿದ್ದರು.

# ಪ್ರಿಯಂಕಾ ಪರ ಯುವ ನಾಯಕ ರಾಹುಲ್ ಜಾರಕಿಹೊಳಿ ಅಬ್ಬರ ಪ್ರಚಾರ

ಬೆಳಗಾವಿ: ಬಡವರು ದೀನ ದಲಿತರು ಸೇರಿದಂತೆ ಎಲ್ಲಾ ವರ್ಗಗಳ ಜನರ ಪಕ್ಷವೆಂದರೆ ಅದು ಕಾಂಗ್ರೆಸ ಪಕ್ಷ ವಾಗಿದೆ. ಜನಪರ ಯೋಜನೆಗಳನ್ನು ಜಾರಿ ತಂದು ಅಬಿವೃದ್ಧಿ ಮಾಡುವ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನಮ್ಮ ಸಹೋದಿರಿ ಪ್ರಿಯಂಕಾ ಜಾರಕಿಹೊಳಿ ಅವರನ್ನು ಗೆಲ್ಲಿಸಿ ಅಧಿಕಾರಕ್ಕೆ ತರಬೇಕು ಎಂದು ಯುವ ನಾಯಕ ರಾಹುಲ್ ಜಾರಕಿಹೊಳಿ ಹೇಳಿದರು.

ಚಿಕ್ಕೋಡಿ ಲೋಕಸಭೆ ವ್ಯಾಪ್ತಿಯ ರಾಯಬಾಗ ವಿಧಾನಸಭಾ ಕ್ಷೇತ್ರದ ಕಂಕಣವಾಡಿ ಪಪಂ ಮತ ಕ್ಷೇತ್ರದಲ್ಲಿ ಮತಯಾಚಿಸಿ ಮಾತನಾಡಿದ ಅವರು, ಕಾಂಗ್ರೆಸ ಪಕ್ಷ ತತ್ವ ಸಿದ್ಧಾಂತ.ಜನಪರ ಯೋಜನೆ ಗಳನ್ನು ಜಾರಿಗೆ ತಂದು ಅಭಿವೃದ್ಧಿ ಮಾಡುವ ಮೂಲಕ ಎಲ್ಲಾ ಸಮುದಾಯಗಳ.ಅಭಿವೃದ್ಧಿಯ ಬಯಸುವ ಪಕ್ಷ ಕಾಂಗ್ರೆಸ ಎಂದರು.

ಸಿದ್ಧರಾಮಯ್ಯ ಮುಖ್ಯ ಮಂತ್ರಿಯಾಗಿದ್ದಾಗ ಅನೇಕ ಜನಪರ



ಬಾಗ್ಯಗಳನ್ನು ಜಾರಿಗೆ ತಂದಿದ್ದಾರೆ ಅಲ್ಲದೆ ಬಡವರ ಹಾಗೂ ವಿದ್ಯಾರ್ಥಿಗಳ ಹಸಿದು ಹೊಟ್ಟೆ ತುಂಬಿಸಲು ಇಂದಿರಾ ಕ್ಯಾಟೀನ್ ಆರಂಭಿಸಿದರು ಮಹಿಳೆಯರ ಹಾಗೂ ನಿರುದ್ಯೋಗ ಯುವಕರಿಗಾಗಿ ಅನೇಕ ಹೊಸ ಯೋಜನೆಗಳನ್ನು ಜಾರಿಗೆ ತಂದರು ಎಂದರು.

ಸತೀಶ ಜಾರಕಿಹೊಳಿ ಫೌಂಡೇಶನ್ ಮೂಲಕ ಯಾವುದೇ ಭೇದಭಾವ ಇಲ್ಲದೇ ಪ್ರತಿಭಾವಂತ ಕ್ರೀಡಾಪಟುಗಳಿಗೆ ಹಾಗೂ ವಿದ್ಯಾರ್ಥಿಗಳಿಗೆ ಪ್ರೋತ್ಸಾಹ ನೀಡುತ್ತ ಅವರಿಗೆ ಮನೋ ಸ್ಥೈರ್ಯ ತುಂಬಿದ್ದಾರೆ. ವಯಸ್ಸಿನಲ್ಲಿ ಚಿಕ್ಕವರಿದ್ದರು ಸಮಾಜ ಸೇವೆಯಲ್ಲಿ ಅವರ ಕೀರ್ತಿ ದೊಡ್ಡದಾಗಿದೆ. ಹೀಗಾಗಿ ಅವರನ್ನು ಆಯ್ಕೆ ಮಾಡುವ ಮೂಲಕ ಚಿಕ್ಕೋಡಿ ಸಮಗ್ರ ಅಭಿವೃದ್ಧಿಗೆ ಸಹಕರಿಸಬೇಕು ಎಂದರು.

ಕರ್ನಾಟಕದಲ್ಲಿ ಕಾಂಗ್ರೆಸ್ ಸರಕಾರ ವಿಶೇಷ ಜನಪರ ಕಾರ್ಯಕ್ರಮಗಳೊಂದಿಗೆ ಅಭಿವದ್ಧಿಯ ಕ್ರಾಂತಿ ಗೆ ಮುನ್ನುಡಿ ಬರೆದಿದ್ದು, ರೈತರು, ಕೂಲಿ ಕಾರ್ಮಿಕರು, ಬಡವರು, ಮಧ್ಯಮ ವರ್ಗದವರು ಸೇರಿದಂತೆ ಎಲ್ಲರೂ ನೆಮ್ಮದಿಯಿಂದ ಬದುಕು ಸಾಗಿಸಲು ಈ ಬಾರಿ ಕಾಂಗ್ರೆಸ್‌ಗೆ ಮತ ನೀಡಬೇಕು. ಭ್ರಷ್ಟಾಚಾರ ಮುಕ್ತ ಅಧಿಕಾರ ನೀಡಲು ನಮ್ಮ ಸಹೋದರಿ ಪ್ರಿಯಾಂಕಾ ಜಾರಕಿಹೊಳಿ ಅವರಿಗೆ ಒಂದು ಅವಕಾಶ ಮಾಡಿಕೊಡಬೇಕು ಎಂದು ಹೇಳಿದರು.

ಈ ವೇಳೆ ಯುವ ನಾಯಕ ರಾಹುಲ್ ಜಾರಕಿಹೊಳಿ ಅವರನ್ನು ಗ್ರಾಮದ ಮುಖಂಡರು ಹಾಗೂ ಯುವಕರು ಸನ್ಮಾನಿಸಿದರು. ಈ ವೇಳೆ ಕಾಂಗ್ರೆಸ್ ಮುಖಂಡ ಅರ್ಜುನ ನಾಯಕವಾಡಿ, ತಮ್ಮಣ್ಣ ನಾಯಕವಾಡಿ, ಸಿದ್ದು ಬಂಡಿಗಾರ, ಬಾಳಪ್ಪ ಅರಬಾಂವಿ, ಕರೆಪ್ಪ ಪೂಜೇರಿ, ರವೀಂದ್ರ ಪೂಜೇರಿ, ಭೀಮಪ್ಪ ಮಸರಗುಟ್ಟಪಿ, ಭೀಮಪ್ಪ ನಾಯಕವಾಡಿ, ಬಸವರಾಜ ಮರ್ದಿ, ಡಾ. ಅರವಿಂದ ಗಡಾದಿ, ಸಚೀನ್ ನಾಯಕವಡಿ ಸೇರಿದಂತೆ ಇತರರು ಇದ್ದರು.

# "ಸುಮಾ" ಕನ್ನಡ ಚಲನಚಿತ್ರಕ್ಕೆ ಮೂಹೂರ್ತ



ಬೆಂಗಳೂರು: 'ಓಂಸಾಯಿ ಸಿನೆಮಾಸ್' ಬ್ಯಾನರಿನಲ್ಲಿ ನಿರ್ಮಾಣವಾಗುತ್ತಿರುವ ಮಹಿಳಾ ಪ್ರಧಾನ ಕಥಾಹಂದರ ಹೊಂದಿರುವ 'ಸುಮಾ' ಸಿನಿಮಾದ ಮುಹೂರ್ತ ಸಮಾರಂಭ ಬೆಂಗಳೂರಿನ ತ್ಯಾಗರಾಜನಗರದ ಗಣಪತಿ ದೇವಸ್ಥಾನದಲ್ಲಿ ನೆರವೇರಿತು.

ಹಿರಿಯ ನಟ , ನಿರ್ದೇಶಕ ರವಿಕಿರಣ್ ಕ್ಯಾಮರಾ ಸ್ವಿಚ್ ಆನ್ ಮಾಡಿದರೆ, ನಿರ್ಮಾಪಕರಾದ ಸಂಜಯ್‌ಗೌಡ ಕ್ಲಾಪ್ ಮಾಡುವ ಮೂಲಕ ಸಿನಿಮಾದ ಚಿತ್ರೀಕರಣಕ್ಕೆ ಚಾಲನೆ ನೀಡಿದರು. ಈಗಾಗಲೇ ಕನ್ನಡದಲ್ಲಿ 'ಶ್ರೀಕಬ್ಬಾಳಮ್ಮನ ಮಹಿಮೆ', 'ಮನೆ', 'ಬ್ಯಾಂಕ್ ಲೋನ್', 'ಸುಳಿ' ಸೇರಿದಂತೆ ನಾಲ್ಕು ಸಿನಿಮಾಗಳನ್ನು ನಿರ್ದೇಶಿಸಿ ಸೈ ಎನಿಸಿಕೊಂಡಿರುವ ರಶ್ಮಿ ಎಸ್. 'ಸುಮಾ' ಸಿನಿಮಾಕ್ಕೆ ಕಥೆ, ಚಿತ್ರಕಥೆ, ಸಂಭಾಷಣೆ ಬರೆದು ನಿರ್ದೇಶನ ಮಾಡುತ್ತಿದ್ದಾರೆ. 'ಇದೊಂದು ಮಹಿಳಾ ಪ್ರಧಾನ ಕಥಾಹಂದರದ ಸಿನಿಮಾ. 'ಸುಮಾ' ಅಂದ್ರೆ ಸಂಪೂರ್ಣ ಮೊಗ್ಗು ಅಲ್ಲದ, ಸಂಪೂರ್ಣ ಅರಳಿಯೂ ಇರದಂತಹ ಹೂವು. ಈ ಸಿನಿಮಾದ ನಾಯಕಿಯ ಪಾತ್ರ ಕೂಡ ಹಾಗೇ ಇರುವಂಥದ್ದು. ನಮ್ಮ ನಡುವೆಯೇ ಇರುವಂಥ ಹುಡುಗಿಯೊಬ್ಬಳ ಅಂತರಂಗದ ಕಥೆ ಈ ಸಿನಿಮಾದಲ್ಲಿದೆ.

ಮುಂದಿನ ದಿನಗಳಲ್ಲಿ ಚಿತ್ರದ ನಾಯಕಿ ಮತ್ತು ಸಿನಿಮಾದ ಬಗ್ಗೆ ಇನ್ನಷ್ಟು ಮಾಹಿತಿ ನೀಡಲಿದ್ದೇವೆ'ಎಂದು ನಿರ್ದೇಶಕಿ ರಶ್ಮಿ ತಿಳಿಸಿದರು.

ಇದೇ ಏಪ್ರಿಲ್ ತಿಂಗಳಿನಿಂದ 'ಸುಮಾ' ಸಿನಿಮಾದ ಚಿತ್ರೀಕರಣ ಪ್ರಾರಂಭವಾಗಲಿದ್ದು ಒಟ್ಟು 25 ದಿನಗಳ ಕಾಲ ಒಂದೇ ಹಂತದಲ್ಲಿ ಮಂಡ್ಯ, ಮದ್ದೂರು, ಆಲಭುಜನಹಳ್ಳಿ, ಕೆ. ಎಂ ದೊಡ್ಡಿ, ನಗರಕೆರೆ ಸುತ್ತಮುತ್ತ ಸಿನಿಮಾದ ಚಿತ್ರೀಕರಣ ನಡೆಯಲಿದೆ. ಮೈಸೂರು ಮೂಲದ ಪ್ರದೀಪ್ ಗೌಡ 'ಸುಮಾ' ಸಿನಿಮಾದಲ್ಲಿ ನಾಯಕನಾಗಿ ಅಭಿನಯಿಸುತ್ತಿದ್ದು, ಉಳಿದಂತೆ ಬಾಲರಾಜವಾಡಿ, ರೇಣು ಶಿಕಾರಿ, ಮುರಳೀಧರ್ ಡಿ. ಆರ್, ಕಾವ್ಯ ಪ್ರಕಾಶ್, ರೋಹಿಣಿ, ಸುನಂದ ಕಲಬುರ್ಗಿ, ರೇಣುಕುಮಾರ್ ಸಂಸ್ಥಾನಮಠ, ಅವಿನಾಶ ಗಂಜಿಹಾಳ, ಶಿವಕುಮಾರ್ ಆರಾಧ್ಯ , ಹರಿಹರನ್ ಬಿ. ಪಿ ಮುಂತಾದವರು ಅಭಿನಯಿಸುತ್ತಿದ್ದಾರೆ.

ಶಂಖು, ನಟರಾಜ್ ಛಾಯಾಗ್ರಹಣ, ಮುತ್ತುರಾಜ್ ಟಿ. ಸಂಕಲನ, ಸಿನಿಮಾದ ಹಾಡುಗಳಿಗೆ ಎನ್. ರಾಜು ಸಂಗೀತ, ಸತೀಶ್ ಜೋಶಿ ಹಾವೇರಿ ಸಾಹಿತ್ಯ ಮತ್ತು ಸಹ ನಿರ್ದೇಶನವಿದೆ. ಮೇಘನ ಹಳಿಯಾಳ ಹಾಡಿಗೆ ಧ್ವನಿಯಾಗಲಿದ್ದು, ಪತ್ರಿಕಾ ಸಂಪರ್ಕ ಕಾರ್ತಿಕ್ ಸುಧನ್, ಡಾ.ಪ್ರಭು ಗಂಜಿಹಾಳ, ಡಾ.ವೀರೇಶ ಹಂಡಿಗಿ ಅವರದಿದೆ. ಸಿನಿಮಾಕ್ಕೆ ರಂಗಸ್ವಾಮಿ ಟಿ (ರವಿ) ಸಹ ನಿರ್ಮಾಪಕರಾಗಿದ್ದಾರೆ.

ಚಿತ್ರತಂಡದ ಯೋಜನೆಯಂತೆ, ಇದೇ ಆಗಷ್ಟ್ ವೇಳೆಗೆ 'ಸುಮಾ' ಸಿನಿಮಾದ ಕೆಲಸಗಳನ್ನು ಪೂರ್ಣಗೊಳಿಸಿ, ಪ್ರೇಕ್ಷಕರ ಮುಂದೆ ತರುವ ಯೋಚನೆಯಲ್ಲಿದೆ ಚಿತ್ರತಂಡ.

# ವಿದ್ಯಾರ್ಥಿ ನಿಲಯಕ್ಕೆ ಕಟ್ಟಡ ಬಾಡಿಗೆಗೆ ಬೇಕಾಗಿದೆ

ಬಳ್ಳಾರಿ: ತಾಲ್ಲೂಕಿನ ಬೆಣಕಲ್ಲು ಗ್ರಾಮದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಬೆಣಕಲ್ಲು (ಬಿಸಿಡಬ್ಲ್ಯೂಡಿ 1351) ಈ ವಿದ್ಯಾರ್ಥಿ ನಡೆಸಲು ಲೋಕೋಪಯೋಗಿ ಇಲಾಖೆ ನಿಗದಿ ಪಡಿಸುವ ಬಾಡಿಗೆಗೆನುಸಾರವಾಗಿ ಕಟ್ಟಡವನ್ನು ಬಾಡಿಗೆಗೆ ನೀಡಲು ಇಚ್ಛಿಸುವ ಕಟ್ಟಡಗಳ ಮಾಲೀಕರಿದ್ದಲ್ಲಿ ಸಂಪರ್ಕಿಸಬೇಕು ಎಂದು ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ ಅವರು ತಿಳಿಸಿದ್ದಾರೆ.

ಸಂಪರ್ಕಿಸಬೇಕಾದ ಕಚೇರಿ ವಿಳಾಸ:

ತಾಲ್ಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, 1ನೇ ಮಹಡಿ ಡಿಸ್ನಿ ಫಂಕ್ಷನ್ ಹಾಲ್ ಎದುರುಗಡೆ, ಎಲ್.ಎಲ್.ಸಿ ಕಾಲೋನಿ ಹತ್ತಿರ, ಓ.ಪಿ.ಸರ್ಕಲ್

ಕಂಟೋನ್ಮೆಂಟ್, ಬಳ್ಳಾರಿ–583104, ದೂರವಾಣಿ ಸಂಖ್ಯೆ: 08392 294492 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸುಣಧೋಳಿ ಸೇತುವೆ ಜಲಾವೃತ–ಸಂಚಾರ ಸ್ಥಗಿತ

ಮೂಡಲಗಿ: ಬೇಸಿಗೆ ಹಿನ್ನಲೆ ಜನ–ಜಾನುವಾರು ಗಳಿಗೆ ಕುಡಿಯುವ ನೀರಿನ ಉದ್ದೇಶಕ್ಕಾಗಿ ಹಿಡಕಲ್ ಜಲಾಶಯದಿಂದ ಘಟಪ್ರಭಾ ನದಿಗೆ ನೀರನ್ನು ಬೀಡುಗಡೆ ಮಾಡಿದ ಹಿನ್ನಲೆ ಶುಕ್ರವಾರದಂದು ತಾಲೂಕಿನ ಸುಣಧೋಳಿ– ಮೂಡಲಗಿಗೆ ಸಂಪರ್ಕ ಕಲ್ಪಿಸುವ ಸುಣಧೋಳಿ ಸೇತುವೆಯು ಜಲಾವೃತಗೊಂಡು ಸಂಚಾರ ಸ್ಥಗಿತಗೊಂಡಿದೆ.



ಸುಣಧೋಳಿಯ ಬಳಿಯ ಘಟಪ್ರಭಾ ನದಿಯ ಸೇತುವೆಗೆ ಅಡ್ಡಲಾಗಿ ಗೇಟ್‌ಗಳನ್ನು ಹಾಕಿರುವುದರಿಂದ ಸೇತುವೆ ಮೇಲೆ ನೀರು ಹರಿದು ಬರುತ್ತಿದೆ.


ಇದರಿಂದ ಸೇತುವೆ ಮೇಲಿನ ಸಂಚಾರ ಸ್ಥಗಿತವಾಗಿದೆ. ನದಿಯ ಎರಡು ಬದಿಯಲ್ಲಿ ಬ್ಯಾರಿಗೇಟ್ ಹಾಕಿ ಪೊಲೀಸ್ ಸಿಬ್ಬಂದಿಗಳನ್ನ ನಿಯೋಜನೆ ಮಾಡಲಾಗಿದೆ.

ಘಟಪ್ರಭಾ ನದಿಗೆ ಕುಡಿಯುವ ನೀರಿಗಾಗಿ ನೀರನ್ನು ಬೀಡಲಾಗಿದ್ದು, ಸುಣಧೋಳಿ ಸೇತುವೆ ಜಲಾವೃತಗೊಂಡ ಹಿನ್ನೆಲೆ ಮೂರು ದಿನಗಳ ವರೆಗೆ ಸಂಚಾರವನ್ನು ಸ್ಥಗಿತಗೊಳಿಸಲಾಗಿದೆ ಎಂದು ತಹಶೀಲ್ದಾರ್ ಬಿ ಎಸ್ ಕಡಕಬಾವಿ ತಿಳಿಸಿದ್ದಾರೆ.

# ಉತ್ತರ ಕನ್ನಡ ಲೋಕಸಭಾ ಕ್ಷೇತ್ರದಿಂದ ಸ್ವಾಮೀಜಿ ಕಣಕ್ಕೆ

ಬೆಳಗಾವಿ: ಲೋಕಸಭಾ ಕ್ಷೇತ್ರದಿಂದ ಸ್ಪರ್ಧಿಸುವುದಾಗಿ ಹೇಳಿದ್ದ ಕಿತ್ತೂರು ದೇಗುಲ ಹಳ್ಳಿ–ಅಂಬಡಗಟ್ಟಿ ಮಡಿವಾಳೇಶ್ವರ ಮಠದ ವೀರೇಶ್ವರ ಸ್ವಾಮೀಜಿ ಇದೀಗ ಕ್ಷೇತ್ರ ಬದಲಿಸುವ ಕೈಗೊಂಡಿದ್ದಾರೆ.

ಬೆಳಗಾವಿ ಲೋಕಸಭಾ ಕ್ಷೇತ್ರದ ಎಂಟು ಮತಕ್ಷೇತ್ರದಲ್ಲಿ ನನ್ನ ಭಕ್ತರಿದ್ದಾರೆ. ಅವರ ಒತ್ತಾಯದಿಂದ ಬೆಳಗಾವಿ ಲೋಕಸಭಾ ಕ್ಷೇತ್ರದಿಂದ ಸ್ಪರ್ಧೆ ನಡೆಸುವುದಾಗಿ ಸ್ವಾಮೀಜಿ ಹೇಳಿದ್ದರು. ಇದೀಗ ದಿಢೀರ್ ತಮ್ಮ ನಿರ್ಧಾರ ಬದಲಿಸಿರುವ ಸ್ವಾಮೀಜಿ,



ಕಿತ್ತೂರು ಮತಕ್ಷೇತ್ರ ಉತ್ತರ ಕನ್ನಡ ಲೋಕಸಭಾ ವ್ಯಾಪ್ತಿಗೆ ಬರುವುದರಿಂದ ನಾನು ಈ ಕ್ಷೇತ್ರದಿಂದ ಸ್ಪರ್ಧಿಸುತ್ತಿದ್ದೇನೆ. ಮಠದ ಸ್ವಾಮೀಜಿಯಾಗಿ ಸೇವೆ ಸಲ್ಲಿಸುತ್ತಿರುವ ನಾನು ಸಮಾಜ ಸೇವೆ ಮಾಡಬೇಕು. ಉತ್ತಮ ಆಡಳಿತ ನೀಡುವ ಉದ್ದೇಶದಿಂದ ಕಣಕ್ಕಿಳಿಯುತ್ತಿದ್ದೇನೆ. ಇದು ನನ್ನ ವೈಯಕ್ತಿಕ ಹಾಗೂ ಭಕ್ತರ ಇಚ್ಛೆ ಆಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಕಿತ್ತೂರು ಹಾಗೂ ಖಾನಾಪುರ ತಾಲೂಕಿನ ವಿವಿಧ ಗ್ರಾಮಗಳಲ್ಲಿ ಸಭೆ ನಡೆಸಲಾಗಿದ್ದು, ಜನರಿಂದ ಉತ್ತಮ ಸ್ಪಂದನೆ ಸಿಕ್ಕಿದೆ. ಜನ ಸದಾ ನನ್ನೊಂದಿಗೆ ಇದ್ದು ಚುನಾವಣೆಯಲ್ಲಿ ಬೆಂಬಲಿಸುವುದಾಗಿ ಹೇಳಿದ್ದಾರೆ ಎಂದು ಸ್ವಾಮೀಜಿ ಸ್ಪಷ್ಟಪಡಿಸಿದ್ದಾರೆ. ಧಾರವಾಡ ಲೋಕಸಭಾ ಕ್ಷೇತ್ರದಲ್ಲಿ ಪ್ರಹ್ಲಾದ ಜೋಶಿ ವಿರುದ್ಧ ದಿಂಗಾಲೇಶ್ವರ ಸ್ವಾಮೀಜಿ ಸ್ಪರ್ಧಿಸುತ್ತಿದ್ದಾರೆ. ಆದರೆ, ನನಗೆ ಕಾಂಗ್ರೆಸ್ ಮತ್ತು ಬಿಜೆಪಿ ಎರಡು ಒಂದೇ. ಜನಸೇವೆ ಮಾಡುವ ಉದ್ದೇಶದಿಂದ ನಾನು ಸ್ವತಂತ್ರ ಅಭ್ಯರ್ಥಿಯಾಗಿ ಕಣಕ್ಕಿಳಿಯುತ್ತಿದ್ದೇನೆ ಎಂದು ಅವರು ತಿಳಿಸಿದರು.

# ಬೆಳಗಾವಿ: ಚೆಕ್ ಪೋಸ್ಟ್ ಗಳಲ್ಲಿ ಬಿಸಿಲಿಗೆ ಹೈರಾಣಾದ ಸಿಬ್ಬಂದಿಗೆ ಏರ್ ಕೂಲರ್ ವ್ಯವಸ್ಥೆ

ಬೆಳಗಾವಿ: ಒಂದೆಡೆ ಲೋಕಸಭಾ ಚುನಾವಣಾ ಅಖಾಡ ಕಾವೇರುತ್ತಿದೆ. ಇನ್ನೊಂದೆಡೆ ರಣಬಿಸಿಲ ಝಳಕ್ಕೆ ಜನರು ಮಾತ್ರವಲ್ಲ ಚುನಾವಣಾ ಸಿಬ್ಬಂದಿ, ಪೊಲೀಸ್ ಸಿಬ್ಬಂದಿಗಳು ತತ್ತರಿಸಿ ಹೋಗುತ್ತಿದ್ದಾರೆ. ರಾಜ್ಯದಲ್ಲಿ ಒಂದೇ ಸಮನೇ ಹೆಚ್ಚುತ್ತಿರುವ ತಾಪಮಾನ, ಬಿಸಿಗಾಳಿಗೆ ಚೆಕ್ ಪೋಸ್ಟ್ ಗಳಲ್ಲಿ ಸಿಬ್ಬಂದಿಗಳು ಸುಸ್ತಾಗಿ ಹೋಗಿದ್ದಾರೆ.

ಸಿಬ್ಬಂದಿಗಳ ಮೇಲಿನ ಕಾಳಜಿಗೆ ಬೆಳಗಾವಿ ಜಿಲ್ಲಾಡಳಿತ ಏರ್ ಕೂಲರ್ ವ್ಯವಸ್ಥೆ ಮಾಡಿದೆ. ಗಡಿ ಜಿಲ್ಲೆ ಬೆಳಗಾವಿಯಲ್ಲಿ



ಮಧ್ಯಾಹ್ನವಾಗುತ್ತಿದ್ದಂತೆ ಉಷ್ಣಗಾಳಿ, ರಣಬಿಸಿಲ ಬೇಗೆಯಿಂದ ಚೆಕ್ ಪೋಸ್ಟ್ ಗಳಲ್ಲಿ ಚುನಾವಣಾ ಸಿಬ್ಬಂದಿಗಳು, ಪೊಲೀಸ್ ಸಿಬ್ಬಂದಿಗಳು ಸಂಕಷ್ಟಕ್ಕೆ ಸುಲುಕುತ್ತಿದ್ದಾರೆ.

ಚೆಕ್ ಪೋಸ್ಟ್ ಸಿಬ್ಬಂದಿಗಳ ಅನುಕೂಲಕ್ಕಾಗಿ 66 ಚೆಕ್ ಪೋಸ್ಟ್ ಗಳಲ್ಲಿ ಜಿಲ್ಲಾಡಳಿತ ಏರ್ ಕೂಲರ್, ನೀರಿನ ಕ್ಯಾನ್ ವ್ಯವಸ್ಥೆ ಮಾಡಿದೆ.

ಬೆಳಗಾವಿಯ ವಿವಿಧ ಚೆಕ್ ಪೋಸ್ ಗಳಿಗೆ ಡಿಸಿ ನಿತೇಶ್ ಪಾಟೀಲ್ ಹಾಗೂ ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟೀನ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಲ್ಲದೇ ಚುನಾವಣಾ ಸಿಬ್ಬಂದಿಗಳು ಹಾಗೂ ಪೊಲೀಸ್ ಸಿಬ್ಬಂದಿಗಳ ಕಾರ್ಯವೈಖರಿ ಬಗ್ಗೆಯೂ ಪರಿಶೀಲಿಸಿ, ಮಾಹಿತಿ ಸಂಗ್ರಹಿಸಿದ್ದಾರೆ.

## ಲೋಕಸಭಾ ಚುನಾವಣೆ: ಪ್ರಿಂಟಿಂಗ್ ಪ್ರೆಸ್ ಮಾಲೀಕರ ಸಭೆ

# ಕರಪತ್ರ, ಪೋಸ್ಟರ್ ಮುದ್ರಣ; ನಿಯಮ ಪಾಲನೆಗೆ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಕಟ್ಟುನಿಟ್ಟಿನ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣಾ ಹಿನ್ನೆಲೆಯಲ್ಲಿ ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳ ಚುನಾವಣಾ ಪ್ರಚಾರದ ಕರಪತ್ರ, ಪೋಸ್ಟರ್ ಇತ್ಯಾದಿ ಮುದ್ರಣ ಮಾಡುವಾಗ ಜನತಾ ಪ್ರಾತಿನಿಧ್ಯ ಕಾಯ್ದೆಯ ಕಲಂ 127 ಎ ನಿಯಮಾವಳಿಗಳನ್ನು ಎಲ್ಲ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ ನೀಡಿದರು.

ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಜಿಲ್ಲಾಧಿಕಾರಿ ಕಚೇರಿಯ ಸಭಾಂಗಣದಲ್ಲಿ ಶನಿವಾರ(ಏ.6) ನಡೆದ ಪ್ರಿಂಟಿಂಗ್ ಪ್ರೆಸ್ ಮಾಲೀಕರ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.


ಅಭ್ಯರ್ಥಿಗಳು ಅಥವಾ ಯಾವುದೇ ರಾಜಕೀಯ ಪಕ್ಷಗಳು ಚುನಾವಣಾ ಪ್ರಚಾರದ ಕರಪತ್ರ ಅಥವಾ ಪೋಸ್ಟರ್ ಗಳನ್ನು ಮುದ್ರಣಕ್ಕೆ ನೀಡಿದಾಗ ಅವುಗಳನ್ನು ಮುದ್ರಿಸುವ ಮುಂಚೆ ನಿಯಮಾನುಸಾರ ಭರ್ತಿ ಮಾಡಿದ ಅಪೆಂಡಿಕ್ಸ್ 'ಎ' ನಮೂನೆಯನ್ನು ಅವರಿಂದ ಪಡೆದುಕೊಳ್ಳಬೇಕು.

ಕರಪತ್ರ ಹಾಗೂ ಪೋಸ್ಟರ್ ಗಳನ್ನು ಮುದ್ರಿಸಿದ ಬಳಿಕ ಪ್ರಿಂಟಿಂಗ್ ಪ್ರೆಸ್ ಮಾಲೀಕರು ಅಪೆಂಡಿಕ್ಸ್ 'ಬಿ' ನಮೂನೆಯನ್ನು ಭರ್ತಿ ಮಾಡಿ ಮುದ್ರಿತ ಕರಪತ್ರ ಅಥವಾ ಪೋಸ್ಟರ್ ಗಳೊಂದಿಗೆ ಜಿಲ್ಲಾ ಚುನಾವಣಾಧಿಕಾರಿ/ ಚುನಾವಣಾಧಿಕಾರಿಗಳಿಗೆ ಅಥವಾ ಚುನಾವಣಾ ವೆಚ್ಚ ನೋಡಲ್ ಅಧಿಕಾರಿಗಳಿಗೆ ಸಲ್ಲಿಸಬೇಕು.

ಕರಪತ್ರ ಹಾಗೂ ಪೋಸ್ಟರ್ ಗಳಲ್ಲಿ ಪ್ರಕಾಶಕರ ಹೆಸರು, ಮುದ್ರಕರ ಹೆಸರು, ಮುದ್ರಣಾಲಯ ವಿಳಾಸ, ಮುದ್ರಿತ ಪ್ರತಿಗಳ ಸಂಖ್ಯೆ ಇತ್ಯಾದಿ ವಿವರವನ್ನು ಕಡ್ಡಾಯವಾಗಿ ಮುದ್ರಿಸಬೇಕು ಎಂದು ತಿಳಿಸಿದರು.

ಮುದ್ರಣದ ವೆಚ್ಚವನ್ನು ಸಂಬಂಧಿಸಿದ ಪಕ್ಷ ಅಥವಾ ಅಭ್ಯರ್ಥಿಗಳ ಚುನಾವಣಾ ವೆಚ್ಚಕ್ಕೆ ಸೇರ್ಪಡೆ ಮಾಡಲು ಅನುಕೂಲವಾಗುವಂತೆ ಮುದ್ರಿತ ಕರಪತ್ರ ಅಥವಾ ಪೋಸ್ಟರ್ ಪ್ರತಿಗಳ ಜತೆಗೆ ಅಪೆಂಡಿಕ್ಸ್ ಎ, ಬಿ ಹಾಗೂ ವೆಚ್ಚದ ಮಾಹಿತಿಯನ್ನು ಜಿಲ್ಲಾ ಚುನಾವಣಾಧಿಕಾರಿಗಳು ಅಥವಾ ಜಿಲ್ಲಾ ವೆಚ್ಚ ನೋಡಲ್ ಅಧಿಕಾರಿಗಳ ಕಚೇರಿಯಲ್ಲಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ತಿಳಿಸಿದರು.

ಪ್ರಕಾಶಕರು ದ್ವಿಪ್ರತಿಯಲ್ಲಿ ಮುದ್ರಕರಿಗೆ ಡಿಕ್ಲೇರೇಷನ್ ಸಲ್ಲಿಸಬೇಕು. ಕರಪತ್ರಗಳ



ಮುದ್ರಣದ ಬಳಿಕ ಮುದ್ರಕರು ನಿಗದಿತ ಅಪೆಂಡಿಕ್ಸ್ "ಎ" ಮತ್ತು "ಬಿ" ನಮೂನೆಗಳಲ್ಲಿ ಭರ್ತಿಮಾಡಿ ಮುದ್ರಿತ ಪ್ರತಿಗಳೊಂದಿಗೆ ಸಲ್ಲಿಸಬೇಕು.

ಯಾವುದೇ ರೀತಿಯ ಕಾನೂನುಬಾಹಿರ ವಿಷಯಗಳನ್ನು ಮುದ್ರಿಸಬಾರದು. ಜಾತಿ–ಧರ್ಮಗಳು, ಸಮುದಾಯಗಳ ನಡುವೆ ವೈಷಮ್ಯ ಉಂಟು ಮಾಡುವ ವಿಷಯಗಳನ್ನು ಯಾವುದೇ ಕಾರಣಕ್ಕೂ ಮುದ್ರಿಸಬಾರದು ಎಂದು ನಿರ್ದೇಶನ ನೀಡಿದರು.

ಮಹಾನಗರ ಪಾಲಿಕೆ, ನಗರ ಸ್ಥಳೀಯ ಸಂಸ್ಥೆಗಳು ಅಥವಾ ಗ್ರಾಮ ಪಂಚಾಯತಿಯಿಂದ ಸೂಕ್ತ ಅನುಮತಿ ಪಡೆಯದೇ ಅನಧಿಕೃತವಾಗಿ ಬ್ಯಾನರ್ ಹಾಗೂ ಪೋಸ್ಟರ್ ಗಳನ್ನು ಅಳವಡಿಸಿದರೆ ಅಂತಹವರ ವಿರುದ್ಧ ಪ್ರಕರಣ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಎಚ್ಚರಿಕೆ ನೀಡಿದರು.

**ಪ್ರಕಾಶಕರು–ಮುದ್ರಕರ ಮಾಹಿತಿ ಕಡ್ಡಾಯ:**

ಪೋಸ್ಟರ್ ಹಾಗೂ ಕರಪತ್ರಗಳನ್ನು ಮುದ್ರಿಸುವಾಗ ಕಡ್ಡಾಯವಾಗಿ ಪ್ರಕಾಶಕರು ಹಾಗೂ ಮುದ್ರಕರ ಹೆಸರು, ವಿಳಾಸ ಮತ್ತಿತರ ಮಾಹಿತಿಯನ್ನು ಕಡ್ಡಾಯವಾಗಿ ಮುದ್ರಿಸಬೇಕು ಎಂದು ಲೋಕಲ್ ಆಡಿಟ್ ಸರ್ಕಲ್ ಜಂಟಿ ನಿರ್ದೇಶಕರು ಹಾಗೂ ಜಿಲ್ಲಾ ವೆಚ್ಚ ನೋಡಲ್ ಅಧಿಕಾರಿ ಶಂಕರಾನಂದ ಬನಶಂಕರಿ ತಿಳಿಸಿದರು.

ಪ್ರಕಾಶಕರು ಮುದ್ರಣಕ್ಕೆ ಮುಂಚಿತವಾಗಿಯೇ ಅಪೆಂಡಿಕ್ಸ್ "ಎ" ಜತೆಗೆ ದ್ವಿಪ್ರತಿಯಲ್ಲಿ ಘೋಷಣಾ ಪತ್ರವನ್ನು ಸಲ್ಲಿಸಬೇಕು.

ಒಂದು ವೇಳೆ ನಿಯಮ ಪಾಲಿಸದಿದ್ದರೆ 6 ತಿಂಗಳು ಜೈಲುಶಿಕ್ಷೆ ಹಾಗೂ 2 ಸಾವಿರ ರೂಪಾಯಿ ದಂಡ ವಿಧಿಸಬಹುದಾಗಿದೆ. ಆದ್ದರಿಂದ ಏನೇ ಪ್ರಚಾರ ಸಾಮಗ್ರಿಗಳನ್ನು ಮುದ್ರಿಸುವಾಗ ಜಾತಿಧರ್ಮ, ವ್ಯಕ್ತಿಗತ ನಿಂದನೆ, ಭಾಷಾ ಸಾಮರಸ್ಯ ಕದಡುವಂತಹ ವಿಷಯಗಳನ್ನು ಯಾವುದೇ ಕಾರಣಕ್ಕೂ ಮುದ್ರಿಸಬಾರದು.

ಮಾದರಿ ನೀತಿಸಂಹಿತೆ ಜಾರಿಯಲ್ಲಿರುವುದರಿಂದ ಕೋಮುಭಾವನೆ ಕೆರಳಿಸುವಂತಹ ವಿಷಯಗಳನ್ನು ಮುದ್ರಿಸಬಾರದು ಎಂದು ತಿಳಿಸಿದರು.

**ಕರಪತ್ರ, ಪೋಸ್ಟರ್ ಪೂರ್ವಪರಿಶೀಲನೆ:**

ಯಾವುದೇ ಪಕ್ಷ ಅಥವಾ ಅಭ್ಯರ್ಥಿಗಳು ಪೋಸ್ಟರ್ ಅಥವಾ ಕರಪತ್ರಗಳನ್ನು ಮುದ್ರಣಕ್ಕೆ ನೀಡುವ ಮುಂಚೆ ಜಿಲ್ಲಾ ಮಾಧ್ಯಮ ಪ್ರಮಾಣೀಕರಣ ಹಾಗೂ ಕಣ್ಗಾವಲು ಘಟಕ (ಎಂಸಿಎಂಸಿ)ದಲ್ಲಿ ಪರಿಶೀಲನೆಗೆ ಸಲ್ಲಿಸಬೇಕು.

ಎಂಸಿಎಂಸಿ ಘಟಕದಲ್ಲಿ ಸದರಿ ಮಾಹಿತಿಯನ್ನು ಪರಿಶೀಲಿಸಿ ಸಮರ್ಪಕವಾಗಿದೆ ಎಂದು ಪ್ರಮಾಣೀಕರಿಸಿದ ಬಳಿಕ ಅಪೆಂಡಿಕ್ಸ್ "ಎ" ಜತೆಗೆ ಮುದ್ರಣಾಲಯಕ್ಕೆ ಸಲ್ಲಿಸಬೇಕು ಎಂದು ಶಂಕರಾನಂದ ಬನಶಂಕರಿ ತಿಳಿಸಿದರು.

ಈಗಾಗಲೇ ನಿಗದಿಪಡಿಸಲಾಗಿರುವ ಎಸ್. ಆರ್. ದರಪಟ್ಟಿಯ ಪ್ರಕಾರ ಮುದ್ರಣದ ವೆಚ್ಚವನ್ನು ಪರಿಗಣಿಸಲಾಗುತ್ತದೆ.

ಆದ್ದರಿಂದ ನಿಗದಿತ ಮೊತ್ತಕ್ಕಿಂತ ಕಡಿಮೆ ಮೊತ್ತದ ಬಿಲ್ ನೀಡದಂತೆ ತಿಳಿಸಿದರು.

ಚುನಾವಣಾ ಪ್ರಚಾರಕ್ಕೆ ಸಂಬಂಧಿಸಿದಂತೆ ಪ್ರತಿಯೊಂದು ವೆಚ್ಚವನ್ನು ಅಭ್ಯರ್ಥಿಗಳ ವೆಚ್ಚಕ್ಕೆ ಸೇರಿಸಬೇಕಾಗುತ್ತದೆ.

ಆದ್ದರಿಂದ ನಿಯಮಾನುಸಾರ ಮುದ್ರಣ ಕಾರ್ಯ ಕೈಗೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ವಿಜಯಕುಮಾರ್ ಹೊನಕೇರಿ ಅವರು ತಿಳಿಸಿದರು.

ಕ್ಯಾಶ್ ರಿಲೀಸ್ ಕಮಿಟಿ ಸದಸ್ಯ ಕಾರ್ಯದರ್ಶಿ ಗೌರಿಶಂಕರ ಕಡೆಚೂರು, ಜಿಲ್ಲಾ ಮಾಧ್ಯಮ ಪ್ರಮಾಣೀಕರ ಹಾಗೂ ಕಣ್ಗಾವಲು ಘಟಕ(ಎಂಸಿಎಂಸಿ) ನೋಡಲ್ ಅಧಿಕಾರಿ ಗುರುನಾಥ ಕಡಬೂರ, ಬೆಳಗಾವಿ ನಗರ ಸೇರಿದಂತೆ ವಿವಿಧ ತಾಲ್ಲೂಕುಗಳ ಮುದ್ರಣಾಲಯದ ಮಾಲೀಕರು ಹಾಗೂ ಪ್ರತಿನಿಧಿಗಳು ಸಭೆಯಲ್ಲಿ ಪಾಲ್ಗೊಂಡಿದ್ದರು.

# ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಅಭ್ಯರ್ಥಿ ಬೆಂಬಲಿಸಿ: ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್

## ಅರಭಾವಿ ಕ್ಷೇತ್ರದಲ್ಲಿ ನಿರೀಕ್ಷೆಗೂ ಮೀರಿ ಬೆಂಬಲ

ಅರಭಾವಿ: ಬಡವರ ಅಭಿವೃದ್ಧಿ, ಮಹಿಳೆಯರ ಸಬಲೀಕರಣಕ್ಕಾಗಿ ಚಿಂತಿಸುವ ಪಕ್ಷ ಎಂದರೆ ಅದು ಕಾಂಗ್ರೆಸ್ ಮಾತ್ರ. ಮುಂದಿನ ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ರಾಜ್ಯ ಸರ್ಕಾರದ ಕೈ ಬಲಪಡಿಸಬೇಕು ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವರಾದ ಲಕ್ಷ್ಮೀ ಹೆಬ್ಬಾಳ್ಕರ್ ಕರೆ ನೀಡಿದರು.

ಅರಭಾವಿ ಪಟ್ಟಣದಲ್ಲಿರುವ ಶ್ರೀ ಆಂಜನೇಯ ದೇವಸ್ಥಾನದ ಸಮುದಾಯ ಭವನದಲ್ಲಿ ಶನಿವಾರ ನಡೆದ ಕಾರ್ಯಕರ್ತರ ಸಮಾವೇಶದಲ್ಲಿ ಮಾತನಾಡಿದ ಸಚಿವರು, ನುಡಿದಂತೆ ನಡೆದ ಸರ್ಕಾರ ನಮ್ಮದು. ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸಿ ಎಂದರು. ಅರಭಾವಿ ಕ್ಷೇತ್ರದಲ್ಲಿ ನಿರೀಕ್ಷೆಗೂ ಮೀರಿ ಬೆಂಬಲ ವ್ಯಕ್ತವಾಗುತ್ತಿದೆ ಎಂದರು.

**ಬಿಜೆಪಿ ಅಭ್ಯರ್ಥಿಯಿಂದ ಬೆಳಗಾವಿಗೆ ಅನ್ಯಾಯ:**

ಬೆಳಗಾವಿ ಜಿಲ್ಲೆಗೆ ಬಿಜೆಪಿ ಅಭ್ಯರ್ಥಿ ಜಗದೀಶ್ ಶೆಟ್ಟರ್ ಸಾಕಷ್ಟು ಅನ್ಯಾಯ ಎಸಗಿದ್ದಾರೆ ಎಂದು ಸಚಿವರು ಆರೋಪಿಸಿದರು. ಬೆಳಗಾವಿಗೆ ಬರಬೇಕಿದ್ದ ಐಐಟಿ ಕಾಲೇಜು, ವಿಮಾನ ನಿಲ್ದಾಣ ವಿಸ್ತರಣೆ ಯೋಜನೆಗಳನ್ನು ತಡೆದರು, ಕರೋನಾ ವೇಳೆ ಹುಬ್ಬಳ್ಳಿಗೆ ಆಕ್ಸಿಜನ್ ಸಿಲಿಂಡರ್ ಗಳನ್ನು ಕೊಂಡೊಯ್ದರು ಎಂದು ಸಚಿವೆ ಟೀಕಿಸಿದರು. ಇದೀಗ ಬೆಳಗಾವಿಯನ್ನು ನನ್ನ ಕರ್ಮಭೂಮಿ ಅಂತಾರೆ. ಇಂತಹ ದ್ವಂದ್ವ ವ್ಯಕ್ತಿ ನಮಗೆ ಬೇಕಾ ಎಂದು ಪ್ರಶ್ನಿಸಿದರು.

ಕಳೆದ ವಿಧಾನಸಭೆ ಚುನಾವಣೆಯಲ್ಲಿ ಸೋತರೂ ಶೆಟ್ಟರ್ ಅವರ ಹಿರಿತನಕ್ಕೆ ಬೆಲೆ ಕೊಟ್ಟು ಎಂಎಲ್ಸಿ ಮಾಡಲಾಯಿತು. ಆದ್ರೂ ಕಾಂಗ್ರೆಸ್ ಬಿಟ್ಟು ಬಿಜೆಪಿಗೆ ವಾಪಸಾಗಿದ್ದಾರೆ. ಮೂರು ತಿಂಗಳ ಹಿಂದಷ್ಟೇ ಪ್ರಧಾನಿ ನರೇಂದ್ರ ಮೋದಿ, ಮಾಜಿ ಸಿಎಂ ಯಡಿಯೂರಪ್ಪ ಹಾಗೂ ಬಿಜೆಪಿ ವಿರುದ್ಧ ಟೀಕಾಸ್ತ್ರ ಮಾಡುತ್ತಿದ್ದ ಜಗದೀಶ್ ಶೆಟ್ಟರ್, ಇದೀಗ ಮೋದಿ ನೋಡಿ ವೋಟ್ ಕೊಡಿ ಅಂತಿದ್ದಾರೆ ಎಂದು ಆರೋಪಿಸಿದರು.




ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ 10 ತಿಂಗಳಲ್ಲಿ ಚುನಾವಣೆಗೂ ಮುನ್ನ ಘೋಷಿಸಿದ್ದ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೆ ತರಲಾಯಿತು. ಇದು ಬಡವರ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಹೊಂದಿರುವ ಕಳಕಳಿ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಹೇಳಿದರು. ಕರ್ನಾಟಕದ ಜನರ ಹಸಿವನ್ನು ನೀಗಿಸುವ ಕೆಲಸವನ್ನು ಕಾಂಗ್ರೆಸ್ ಸರ್ಕಾರ ಮಾಡುತ್ತಿದೆ ಎಂದರು.

**ಜನರಿಂದ ಉತ್ತಮ ಸ್ಪಂದನೆ**

ಪ್ರಚಾರಕ್ಕೆ ಹೋದಲೆಲ್ಲಾ ಕಡೆ ಜನರಿಂದ ಉತ್ತಮ ಸ್ಪಂದನೆ ವ್ಯಕ್ತವಾಗುತ್ತಿದೆ ಎಂದು ಕಾಂಗ್ರೆಸ್ ಅಭ್ಯರ್ಥಿ ಮೃಣಾಲ ಹೆಬ್ಬಾಳ್ಕರ್ ಹೇಳಿದರು.

ಹಿಂದೆ 2014 ರಲ್ಲಿ ನನ್ನ ತಾಯಿ ಲೋಕಸಭೆಗೆ ಸ್ಪರ್ಧಿಸಿದ್ದಾಗ ಅವರಿಗೆ ಅರಭಾವಿ ಕ್ಷೇತ್ರದಲ್ಲಿ ಮುನ್ನಡೆ ಸಿಕ್ಕಿತ್ತು. ಈ ಬಾರಿ ನಿಮ್ಮ ಮನೆ ಮಗ ಸ್ಪರ್ಧಿಸಿದ್ದು, ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಿ ಎಂದು ಮನವಿ ಮಾಡಿದರು. ಜಿಲ್ಲೆಯ ಮಗನಾದ ನನ್ನನ್ನು ಬೆಂಬಲಿಸಿ, ಹೊರಗಿನ ಅಭ್ಯರ್ಥಿ ಚುನಾವಣೆ ಆಗೋವರೆಗೂ ಮಾತ್ರ ಇರುತ್ತಾರೆ. ನಂತರ ನಾವೇ ಅವರನ್ನು ಹುಡುಕಿಕೊಂಡು ಹೋಗಬೇಕಾಗುತ್ತದೆ.

ನಿಮ್ಮ ಸ್ನೇಹಿತ, ಸಹೋದರನಾಗಿ ಕೆಲಸ ಮಾಡುವೆ ಎಂದು ಮೃಣಾಲ್ ಹೇಳಿದರು. ಬೆಳಗಾವಿ ಕ್ಷೇತ್ರದಲ್ಲಿ ಈ ಬಾರಿ ಬದಲಾವಣೆ ಮಾಡೋಣ, ಅದಕ್ಕೆ ಎಲ್ಲರೂ ಸಹಕರಿಸಬೇಕು ಎಂದರು.

ಈ ವೇಳೆ ಮುಖಂಡರಾದ ಭೀಮಪ್ಪ ಹಂದಿಗುಂದ್, ಅನಿಲ್ ಕುಮಾರ್ ದಳವಾಯಿ, ಕೌಜಲಗಿ ಬ್ಲಾಕ್ ಅಧ್ಯಕ್ಷರಾದ ಪ್ರಕಾಶ್ ಅರಳಿ, ರಮೇಶ್ ಉಟಗಿ, ಲಕ್ಕಣ್ಣ ಸವಸುದ್ದಿ, ಬಾಬಾ ಜಮಖಂಡಿ, ಮಾಯಾಪ್ಪ ಕಂಚಿನಮಟ್ಟಿ, ಗಣಪತಿ ಈಡಿಗೇರ, ಮಾರುತಿ ಅಲೋಷಿ,ಮಾಯಪ್ಪ ಬೆನಚನಮರಡಿ, ಕರಿಯಪ್ಪ ಗೌಡಿ, ಸುರೇಶ್ ಪೂಜಾರಿ ಸೇರಿದಂತೆ ನೂರಾರು ಕಾರ್ಯಕರ್ತರು ಉಪಸ್ಥಿತರಿದ್ದರು.

### ಮೃಣಾಲ್ ಹೆಬ್ಬಾಳ್ಕರ್ ಹುಟ್ಟುಹಬ್ಬ ಆಚರಣೆ

ಸಮಾರಂಭದ ವೇಳೆ ಕಾಂಗ್ರೆಸ್ ಅಭ್ಯರ್ಥಿ ಮೃಣಾಲ್ ಹೆಬ್ಬಾಳ್ಕರ್ ಹುಟ್ಟುಹಬ್ಬವನ್ನು ಆಚರಿಸಲಾಯಿತು. ಸ್ಥಳೀಯ ಕಾರ್ಯಕರ್ತರು ಮೃಣಾಲ್ ಕೈಯಿಂದ ಕೇಕ್ ಕತ್ತರಿಸಿ, ಹುಟ್ಟುಹಬ್ಬ ಆಚರಿಸಿದರು. ಮೃಣಾಲ್ ಹೆಬ್ಬಾಳ್ಕರ್ ಅವರು ಲೋಕಸಭೆ ಚುನಾವಣೆಯಲ್ಲಿ ಗೆದ್ದು ಬರಲಿ ಎಂದು ಹಾರೈಸಿದರು. ಕೇಕ್ ಕತ್ತರಿಸುವ ವೇಳೆ ಮೃಣಾಲ್ ಅವರ ಮಾವ ಶಿವಕುಮಾರ್ ಹಾಜರಿದ್ದರು.

## ಮಕ್ಕಳಿಗೆ ರೇಡಿಯೋ ಜಾಕಿ ತರಬೇತಿ

ಬೆಳಗಾವಿ: ಮಹಿಳಾ ಕಲ್ಯಾಣ ಸಂಸ್ಥೆಯ "ನಮ್ಮೂರ ಬಾನುಲಿ" ಸಮುದಾಯ ರೇಡಿಯೋ ಕೇಂದ್ರವು 14 ರಿಂದ 18 ವರ್ಷದೊಳಗಿನ ಮಕ್ಕಳಿಗಾಗಿ ಒಂದು ವಾರಗಳ ವಸತಿ ರಹಿತ ಜ್ಯೂನಿಯರ ರೇಡಿಯೋ ಜಾಕಿ ತರಬೇತಿಯನ್ನು ಬೆಳಗಾವಿಯ ಭಾರತ ಕಾಲನಿಯಲ್ಲಿರುವ ಸಮುದಾಯ ರೇಡಿಯೋ ಕೇಂದ್ರದಲ್ಲಿ ಏಪ್ರಿಲ್ 22ರಿಂದ 29 ರವರೆಗೆ ಆಯೋಜಿಸಿದ್ದು. ತರಬೇತಿ ಅವಧಿಯಲ್ಲಿ ಪತ್ರಿಕಾ ರಂಗದ ಕೌಶಲ್ಯಗಳು, ಸಂವಹನ, ಸಂದರ್ಶನ, ಕಾರ್ಯಕ್ರಮ ನಿರೂಪಣೆ, ಆತ್ಮವಿಶ್ವಾಸ ವೃದ್ಧಿ, ಭಾಷಣ ಕಲೆ ಹಾಗೂ ಆಡಿಯೋ ವಿಡಿಯೋ ಕಾರ್ಯಕ್ರಮಗಳ ತಯಾರಿಕೆ ಮುಂತಾದ ವಿಷಯಗಳ ಬಗ್ಗೆ ಪ್ರಾತ್ಯಕ್ಷಿಕೆಯೊಂದಿಗೆ ತರಬೇತಿ ನೀಡಿ ಭವಿಷ್ಯದ ಮಾಧ್ಯಮ ಕ್ಷೇತ್ರದಲ್ಲಿ ತೊಡಗುವ ವಿದ್ಯಾರ್ಥಿಗಳಿಗೆ ಇದೊಂದು ಸುವರ್ಣಾವಕಾಶವಿದ್ದು ಆಸಕ್ತರು ದಿನಾಂಕ ಏಪ್ರಿಲ್ 17 ರ ಒಳಗಾಗಿ ತಮ್ಮ ಹೆಸರನ್ನು ನೋಂದಾಯಿಸಬೇಕು.

ಹೆಚ್ಚಿನ ಮಾಹಿತಿಗಾಗಿ 9590551177 ಸಂಪರ್ಕಿಸಿರಿ ಎಂದು ಗೌರವ ಕಾರ್ಯದರ್ಶಿಗಳು ಮಹಿಳಾ ಕಲ್ಯಾಣ ಸಂಸ್ಥೆ,ಬೆಳಗಾವಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿತೋ ಸಂಸ್ಥೆ ವತಿಯಿಂದ ಜೈನ ಸಮಾಜದ ವಿದ್ಯಾರ್ಥಿಗಳಿಗೆ ಯುಪಿಎಸ್ಸಿ ಉಚಿತ ತರಬೇತಿ

ಬೆಳಗಾವಿ: ಜೈನ ಇಂಟರ್‌ನ್ಯಾಷನಲ್ ಟ್ರೆಡ್ ಆರ್ಗನೇಝೇಶನ ಜಿತೋ ಸಂಸ್ಥೆಯ ವತಿಯಿಂದ ಕಳೆದ 11 ವರ್ಷಗಳಿಂದ ಜೈನ ಸಮಾಜದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಯುಪಿಎಸ್ಸಿ ಸ್ಪರ್ಧಾತ್ಮ ಪರೀಕ್ಷೆಯ ಸಿದ್ದತೆಗಾಗಿ ಉಚಿತ ತರಬೇತಿಯನ್ನು ನೀಡುತ್ತ ಬಂದಿದೆ.

ಈ ವರ್ಷವೂ ಸಹ ಜಿತೋ ಸಂಸ್ಥೆಯ ವತಿಯಿಂದ ಯುಪಿಎಸ್ಸಿ ಪರೀಕ್ಷೆಯ ಸಿದ್ದತೆಗಾಗಿ ಉಚಿತ ತರಬೇತಿಯನು ನೀಡಲಿದೆ. ಇದಕ್ಕಾಗಿ ಸಮಾಜದ ವಿದ್ಯಾರ್ಥಿಗಳು ಹೆಸರು ನೋಂದಾಯಿಸುವುದು ಕಡ್ಡಾಯವಾಗಿರುತ್ತದೆ.

ಹೆಸರು ನೋಂದಣಿಗೆ ಯಾವುದೇ ಶುಲ್ಕ ಇರುವುದಿಲ್ಲ. ಹೆಸರು ನೋಂದಣಿ ಮಾಡುವ ದಿನಾಂಕ ಏಪ್ರಿಲ 24 ಆಗಿದ್ದು, ಈ ಅವಧಿಯೊಳಗೆ ಹೆಸರು ನೊಂದಾಯಿಸಲು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಕುಂತಿನಾಥ ಕಲಮನಿ ಮೊ:94804-48108 ಇವರನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ಅಮಾವಾಸ್ಯೆಯ ಅನುಭಾವ ಗೋಷ್ಠಿ

ಬೆಳಗಾವಿ: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ, ಜಿಲ್ಲಾಘಟಕ ಅಮವಾಸ್ಯೆಯ ಅನುಭಾವಗೋಷ್ಠಿ ಸೋಮವಾರ ದಿನಾಂಕ 08-04-2024 ರಂದು ಸಾಯಂಕಾಲ 5.00 ಗಂಟೆಗೆ, ಲಿಂಗಾಯತ ಭವನ, ಶಿವಬಸವ ನಗರ ಬೆಳಗಾವಿಯಲ್ಲಿ ಜರುಗುವುದು.

ಶ್ರೀ ಮ.ನಿ.ಪ್ರ.ಪೂಜ್ಯ ಗುರುಸಿದ್ಧ ಮಹಾಸ್ವಾಮಿಗಳು, ಕಾರಂಜಿಮಠ, ಬೆಳಗಾವಿ ಇವರು ಸಾನಿಧ್ಯ ವಹಿಸುವರು. ಶರಣ ಡಾ.ರಾಜಶೇಖರ್ ಬಿರಾದಾರ್ ಕನ್ನಡ ಪ್ರಾಧ್ಯಾಪಕರು ಸರಕಾರಿ ಪ್ರಥಮ ದರ್ಜೆ9 ಕಾಲೇಜು ಯರಗಟ್ಟಿ. ಇವರು "ಅಕ್ಕ ಮಹಾದೇವಿ ಶ್ರೇಷ್ಠ ಸಬಲ ಮಹಿಳೆ" ಎಂಬ ವಿಷಯದ ಮೇಲೆ ಅನುಭಾವ ನೀಡಲಿದ್ದಾರೆ. ಜಿಲ್ಲಾಧ್ಯಕ್ಷರಾದ ಶ್ರೀಮತಿ ರತ್ನಪ್ರಭಾ ಬೆಲ್ಲದ ಇವರು ಅಧ್ಯಕ್ಷತೆ ವಹಿಸುವರು. ಹಾಗೂ ಲಿಂಗಾಯತ ಮಹಿಳಾ ಸಮಾಜವತಿಯಿಂದ ದಾಸೋಹ ಸೇವೆಸಲ್ಲಿಸುವರು.

ಕಾರಣ ಎಲ್ಲ ಬಸವಾಭಿಮಾನಿಗಳು ಸಮಯಕ್ಕೆ ಸರಿಯಾಗಿ ಆಗಮಿಸಿ ಅಮವಾಸ್ಯೆಯ ಅನುಭಾವಗೋಷ್ಠಿ ಕಾರ್ಯಕ್ರಮದಲ್ಲಿ ಭಾಗವಹಿಸಬೇಕೆಂದು ಪ್ರಧಾನ ಕಾರ್ಯದರ್ಶಿಗಳು ವಿನಂತಿಕೊಂಡಿದ್ದಾರೆ.

### ಲೋಕಸಭಾ ಚುನಾವಣೆ: ಬ್ಯಾಂಕ್ ಅಧಿಕಾರಿಗಳ ಸಭೆ

# ಬ್ಯಾಂಕ್ ವಹಿವಾಟು, ಡಿಜಿಟಲ್ ಪಾವತಿಗಳ ಮೇಲೆ ನಿಗಾ ವಹಿಸಲು ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಸೂಚನೆ

ಬೆಳಗಾವಿ: ಲೋಕಸಭಾ ಚುನಾವಣೆ ಹಿನ್ನೆಲೆಯಲ್ಲಿ ಮಾದರಿ ನೀತಿ ಸಂಹಿತೆ ಜಾರಿಯಲ್ಲಿರುವುದರಿಂದ ಅನುಮಾನಾಸ್ಪದ ಬ್ಯಾಂಕ್ ವಹಿವಾಟು ಮತ್ತು ಡಿಜಿಟಲ್ ಪಾವತಿಗಳ ಮೇಲೆ ನಿಗಾ ವಹಿಸಬೇಕು. ಬೃಹತ್ ಮೊತ್ತದ ವಹಿವಾಟು, ಅನುಮಾನಾಸ್ಪದ ವಹಿವಾಟುಗಳು ಕಂಡುಬಂದಲ್ಲಿ ಕೂಡಲೇ ಮಾಹಿತಿಯನ್ನು ನೀಡಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ನಿತೇಶ್ ಪಾಟೀಲ ಅವರು ಬ್ಯಾಂಕ್ ಅಧಿಕಾರಿಗಳಿಗೆ ತಿಳಿಸಿದರು.



ನಗರದ ಹಳೆ ಜಿಲ್ಲಾ ಪಂಚಾಯತ್ ಸಭಾ ಭವನದಲ್ಲಿ ಶನಿವಾರ (ಏ.06) ರಂದು ನಡೆದ ಬ್ಯಾಂಕ್ ಅಧಿಕಾರಿಗಳ ಸಭೆಯಲ್ಲಿ ಮಾದರಿ ನೀತಿ ಸಂಹಿತೆ ಅನ್ವಯ ಬ್ಯಾಂಕ್ ವಹಿವಾಟುಗಳ ಮಾರ್ಗಸೂಚಿಗಳ ಕುರಿತು ಅವರು ಮಾಹಿತಿ ನೀಡಿದರು.

ಲೋಕಸಭಾ ಚುನಾವಣೆಯಲ್ಲಿ ಆಮಿಷಗಳ ಮೂಲಕ ಮತದಾರರ ಮೇಲೆ ಪ್ರಭಾವ ಬೀರುವ ಅಕ್ರಮ ಯತ್ನಗಳನ್ನು ತಡೆಗಟ್ಟಲು, ಚುನಾವಣಾ ಆಯೋಗವು ಅನುಮಾನಾಸ್ಪದ ಬ್ಯಾಂಕ್ ವಹಿವಾಟುಗಳು ಮತ್ತು ಡಿಜಿಟಲ್ ಪಾವತಿಗಳನ್ನು ಕಟ್ಟುನಿಟ್ಟಾಗಿ ಗಮನಿಸುತ್ತಿದೆ.

ಜಿಲ್ಲೆಯಲ್ಲಿ ಸದ್ಯಕ್ಕೆ 5 ಬ್ಯಾಂಕ್ ಗಳು ಮಾತ್ರ ಅನುಮಾನಾಸ್ಪದ ವಹಿವಾಟುಗಳ ಮಾಹಿತಿ ಲಭ್ಯವಾಗುತ್ತಿದ್ದು, ಉಳಿದ ಬ್ಯಾಂಕ್ ಗಳಿಂದ ಮಾಹಿತಿ ಬರಬೇಕಿದೆ. ಬ್ಯಾಂಕ್ ಅಧಿಕಾರಿಗಳು ಕೂಡಲೇ ಅಂತಹ ವಹಿವಾಟಿನ ಕುರಿತು ಮಾಹಿತಿ ಸಲ್ಲಿಸಬೇಕು ಎಂದು ಸೂಚಿಸಿದರು.

ಚೆಕ್ ಪೋಸ್ಟ್‌ಗಳಲ್ಲಿ ದಾಖಲೆಗಳಿಲ್ಲದೇ 50 ಸಾವಿರ ನಗದು ಸಾಗಾಣಿಕೆ ಕಂಡು ಬಂದಲ್ಲಿ ಕೂಡಲೇ ವಶಪಡಿಸಿಕೊಂಡು ನಿಯಮಾನುಸಾರ ಕ್ರಮ ಜರುಗಿಸಲಾಗುತ್ತಿದೆ. ಎಲ್ಲ ಚೆಕ್ ಪೋಸ್ಟ್‌ಗಳಲ್ಲಿ ಅನಧಿಕೃತ ನಗದು ಸಗಣಿಕೆಯನ್ನು ತಡೆಗಟ್ಟಲು ತೀವ್ರ ನಿಗಾ ವಹಿಸಲಾಗಿದೆ. 100 ಕ್ಕಿಂತ ಅಧಿಕ ಮಹಿಳಾ ಬ್ಯಾಂಕ್ ಖಾತೆದಾರಿಗೆ 500, 1000 ರೂಪಾಯಿಗಳಂತೆ ಹಣ ವರ್ಗಾವಣೆಯಾದಲ್ಲಿ ಅಂತಹ ಖಾತೆಗಳನ್ನು ಫ್ರಿಜ್ ಮಾಡಬೇಕು ಎಂದು ಹೇಳಿದರು.

ಚುನಾವಣಾ ಅಭ್ಯರ್ಥಿಗಳು 95 ಲಕ್ಷ ಚುನಾವಣಾ ಪ್ರಚಾರ ಮಿತಿಯನ್ನು ಹೊಂದಿರುತ್ತಾರೆ. ಯಾವುದೇ ದಾಖಲೆಗಳಿಲ್ಲದೆ 10 ಲಕ್ಷಕ್ಕೂ ಅಧಿಕ ಹಣ ಬ್ಯಾಂಕ್ ಜತೆಗೆ ಜಮೆ ಮಾಡಲು ಅವಕಾಶ ಇರುವುದಿಲ್ಲ. ಅಂತಹ ಖಾತೆದಾರರು ಇದ್ದಲ್ಲಿ ಆದಾಯ ತೆರಿಗೆ ನೋಡಲ್ ಅಧಿಕಾರಿಗಳಿಗೆ ಸೂಕ್ತ ದಾಖಲೆ ಸಲ್ಲಿಸಲು ಸೂಚಿಸಬೇಕು.

ಬೃಹತ್ ಮೊತ್ತದ ವಹಿವಾಟುಗಳಾದಲ್ಲಿ ಆದಾಯ ತೆರಿಗೆ ನೋಡಲ್ ಅಧಿಕಾರಿಗಳಿಗೆ ಕೂಡಲೇ ಸಂಪರ್ಕಿಸಿ ಮಾಹಿತಿ ನೀಡಬೇಕು. ಯುಪಿಐ ಡಿಜಿಟಲ್ ಪಾವತಿ ಮೂಲಕ ಕೂಡ ಬೇರೆಬೇರೆ ನಂಬರ್ ಗಳಿಗೆ ಹಣ ವರ್ಗಾವಣೆಯಾಗಿರುವ ಕುರಿತು ಸಹ ಮಾಹಿತಿ ನೀಡಬೇಕು ಎಂದು ತಿಳಿಸಿದರು.

**ಫಲಾನುಭವಿಗಳಿಗೆ ಸಾಲ-ಸೌಲಭ್ಯ ಒದಗಿಸಲು ಸೂಚನೆ:**

ಸರ್ಕಾರದ ವಿವಿಧ ಇಲಾಖೆಯ ಯೋಜನೆಗಳ ಮೂಲಕ ಅರ್ಜಿ ಸಲ್ಲಿಸಿದಲ್ಲಿ ಕೂಡಲೇ ಅರ್ಜಿಗಳನ್ನು ವಿಲೇವಾರಿಗೊಳಬೇಕು. ವಿನಾಕಾರಣ ನೆಪವೊಡ್ಡದೇ ಸಾಲ ಸೌಲಭ್ಯ ಅರ್ಜಿಗಳನ್ನು ತಿರಸ್ಕರಿಸುವ ಹಾಗಿಲ್ಲ. ಅಭ್ಯರ್ಥಿಗಳು ಸೂಕ್ತ ದಾಖಲೆಗಳನ್ನು ಸಲ್ಲಿಸಿದಲ್ಲಿ ಕಡ್ಡಾಯವಾಗಿ ಬ್ಯಾಂಕ್ ಅಧಿಕಾರಿಗಳು ಸಾಲ ಒದಗಿಸಬೇಕು ಎಂದು ಹೇಳಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕರು ಹಾಗೂ ಮಾದರಿ ನೀತಿಸಂಹಿತೆ ನೋಡಲ್ ಅಧಿಕಾರಿ ಶಿವನಗೌಡ ಪಾಟೀಲ, ಲೀಡ್ ಬ್ಯಾಂಕ್ ಮ್ಯಾನೇಜರ್ ಪ್ರಶಾಂತ್ ಕುಲಕರ್ಣಿ, ಕ್ಯಾಶ್ ರಿಲೀಸ್ ಕಮಿಟಿ ಸದಸ್ಯ ಕಾರ್ಯದರ್ಶಿ ಗೌರಿಶಂಕರ ಕಡೆಚೂರು, ಲೋಕಲ್ ಆಡಿಟ್ ಸರ್ಕಲ್ ಜಂಟಿ ನಿರ್ದೇಶಕರಾದ ಶಂಕರಾನಂದ ಬನಶಂಕರಿ ಸೇರಿದಂತೆ ವಿವಿಧ ಬ್ಯಾಂಕ್ ಮುಖ್ಯಸ್ಥರು, ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

## ಎಸ್‌ಎಸ್‌ಎಲ್‌ಸಿ: ದ್ವಿತೀಯ ಭಾಗಣ ಪರೀಕ್ಷೆಗೆ 28,133 ವಿದ್ಯಾರ್ಥಿಗಳು ಹಾಜರು: 366 ಗೈರು

ಧಾರವಾಡ: ಜಿಲ್ಲೆಯಲ್ಲಿ ಎಸ್.ಎಸ್.ಎಲ್.ಸಿ ಪರೀಕ್ಷೆಗಳು ಉತ್ತಮ ರೀತಿಯಲ್ಲಿ ನಡೆದಿದ್ದು, ಇಂದಿನ ದ್ವಿತೀಯ ಭಾಗಣ ವಿಷಯಗಳ ಪರೀಕ್ಷೆಗೆ ಜಿಲ್ಲೆಯ ಪರೀಕ್ಷಾ ಕೇಂದ್ರಗಳಲ್ಲಿ 28,133 ವಿದ್ಯಾರ್ಥಿಗಳು ಹಾಜರಾಗಿದ್ದರು. ಮತ್ತು ವಿವಿಧ ಪರೀಕ್ಷಾ ಕೇಂದ್ರಗಳಲ್ಲಿ 366 ವಿದ್ಯಾರ್ಥಿಗಳು ಗೈರು ಹಾಜರಾಗಿದ್ದರು ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಎಸ್.ಎಸ್. ಕೆಳದಿಮಠ ಅವರು ತಿಳಿಸಿದ್ದಾರೆ. ಈ ಕುರಿತು ಪ್ರಕಟಣೆ ನೀಡಿರುವ ಅವರು, ಜಿಲ್ಲೆಯ 7 ತಾಲೂಕುಗಳ 101 ಪರೀಕ್ಷಾ ಕೇಂದ್ರಗಳಲ್ಲಿ ನಿಯಮಾನುಸಾರ ಪರೀಕ್ಷೆ ನಡೆದಿವೆ. ಜಾಗೃತ ದಳದ ಅಧಿಕಾರಿಗಳು ನಕಲು ತಡೆಯಲು ಉತ್ತಮ ತಪಾಸಣೆ ಕೈಗೊಂಡಿದ್ದಾರೆ ಎಂದು ಅವರು ತಿಳಿಸಿದ್ದಾರೆ.

## ಸೂಕ್ತ ದಾಖಲೆ ಇಲ್ಲದ ಸೀರೆ ಜಪ್ತಿ: ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ

ಬಳ್ಳಾರಿ: ಲೋಕಸಭೆ ಸಾರ್ವತ್ರಿಕ ಚುನಾವಣೆ ಹಿನ್ನಲೆಯಲ್ಲಿ ಮಾದರಿ ನೀತಿ ಸಂಹಿತೆ ಉಲ್ಲಂಘಿಸಿ ಗುರುವಾರ ಸೂಕ್ತ ದಾಖಲೆ ಇಲ್ಲದೆ ಸಾಗಿಸುತ್ತಿದ್ದ 124 ಸೀರೆ (ರೂ.2,79,100 ಮೌಲ್ಯದ) ಗಳನ್ನು ಜಪ್ತಿ ಮಾಡಿ ಪ್ರಕರಣ ದಾಖಲಿಸಲಾಗಿದೆ ಎಂದು ಜಿಲ್ಲಾ ಚುನಾವಣಾಧಿಕಾರಿ ಹಾಗೂ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.



ಅಬಕಾರಿ ಪೊಲೀಸ್ ಅಧಿಕಾರಿಗಳಿಂದ 85.38 ಲೀಟರ್ (ರೂ.41946 ಮೌಲ್ಯ) ಮದ್ಯ ಮತ್ತು ಪೊಲೀಸ್ ಇಲಾಖೆ ಅಧಿಕಾರಿಗಳಿಂದ 8.32 ಲೀಟರ್ (ರೂ.1920 ಮೌಲ್ಯ) ಮದ್ಯ ಸೇರಿದಂತೆ ಒಟ್ಟು 89.70 ಲೀಟರ್ ಮದ್ಯ (ರೂ.43,866 ಮೌಲ್ಯ) ವಶಪಡಿಸಿಕೊಂಡು ಪ್ರಕರಣ ದಾಖಲಿಸಿದ್ದು, ಇಲ್ಲಿಯವರೆಗೆ ಒಟ್ಟು 8 ಪ್ರಕರಣ ದಾಖಲಿಸಿಕೊಳ್ಳಲಾಗಿದೆ.

ಜಿಲ್ಲೆಯಾದ್ಯಂತ ಚುನಾವಣೆಯ ಮಾದರಿ ನೀತಿ ಸಂಹಿತೆಯನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸಲು 16 ಫ್ಲೈಯಿಂಗ್ ಸ್ಕ್ವ್ಯಾಡ್, 24 ಎಸ್‌ಎಸ್ಟಿ ತಂಡ ಮತ್ತು 7 ಅಬಕಾರಿ ತಂಡ ಕಾರ್ಯ ನಿರ್ವಹಿಸುತ್ತಿವೆ ಎಂದು ಜಿಲ್ಲಾ ಚುನಾವಣಾಧಿಕಾರಿಯೂ ಆದ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.

# ಬಡವರು ಹಾಗೂ ಜನಸಾಮಾನ್ಯರ ಪರ ಕೆಲಸ ಮಾಡುವ ಕಾಂಗ್ರೆಸ್ ಗೆ ಮತ ನೀಡಿ: ಪ್ರಿಯಂಕಾ ಜಾರಕಿಹೊಳಿ

ಬೆಳಗಾವಿ: ಬಡವರು ಹಾಗೂ ಜನಸಾಮಾನ್ಯರ ಪರ ಕೆಲಸ ಮಾಡಿ ಅವರ ಕುಂದು ಕೊರತೆಗಳಿಗೆ ಸ್ಪಂದಿಸುವಂತಹ ಕಾಂಗ್ರೆಸ್ ಪಕ್ಷಕ್ಕೆ ನಿಮ್ಮ ಅಮೂಲ್ಯವಾದ ನೀಡಬೇಕು ಎಂದು ಚಿಕ್ಕೋಡಿ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಂಕಾ ಜಾರಕಿಹೊಳಿ ಅವರು ಹೇಳಿದರು.

ಚಿಕ್ಕೋಡಿ ಲೋಕಸಭೆ ಚುನಾವಣೆಯ ಹಿನ್ನೆಲೆಯಲ್ಲಿ ಬೆಳಗಾವಿ ತಾಲೂಕಿನ ಅಲತಗಾ, ಜಾಫರವಾಡಿ, ಚಲುವೇನಟ್ಟಿ, ಮಾಳೇನಟ್ಟಿ, ಮನ್ನಿಕೇರಿ ಗ್ರಾಮದಲ್ಲಿ ಆಯೋಜಿಸಿದ್ದ ಪ್ರಚಾರ ಸಭೆಗಳಲ್ಲಿ ಭಾಗವಹಿಸಿ ಮತಯಾಚಿಸಿ ಅವರು ಮಾತನಾಡಿದರು.



ದೇಶದ ಅಭಿವೃದ್ಧಿ ಮುಖ್ಯ ;ದೇಶದಲ್ಲಿ ಮಧ್ಯದ ಹಾಗೂ ಕೆಳವರ್ಗದಲ್ಲಿ ಕೋಟ್ಯಾಂತರ ಜನತೆ ಜೀವನ ಸಾಗಿಸುತ್ತಿದ್ದಾರೆ. ತಾಲೂಕು, ಜಿಲ್ಲೆಗಳು ಅಲ್ಪ ಮಟ್ಟಿಗೆ ಸುದಾರಣೆ ಕಂಡಿವೆ ಆದರೆ, ಗ್ರಾಮೀಣ ಜನತೆ ಬಹಳಷ್ಟು ಅಭಿವೃದ್ಧಿ ಕಾಣಬೇಕು. ಅಲ್ಲಿಯ ಸಹೋದರ-ಸಹೋದರಿಯರು ಶಿಕ್ಷಣ ಪಡೆದು ದೇಶ-ವಿದೇಶದಲ್ಲಿ ಮಿಂಚಬೇಕಿದೆ.

ಆ ಮದ್ಯದ ಹಾಗೂ ಕೆಳವರ್ಗವನ್ನು ಬುಡಸಮೇತ ಕಿತ್ತು ಹಾಕಬೇಕಿದೆ. ಅದು ನಿಮ್ಮಿಂದ ಸಾಧ್ಯ, ಮತದಾರರು ದೃಢ ನಿರ್ಧಾರ ಮಾಡಿ ಕಾಂಗ್ರೆಸ್ ಮತ ಬೇಕು ಎಂದರು.

ಕಾಲಮಾನ ಉರುಳಿದಂತೆ ದೇಶದ ಅಭಿವೃದ್ಧಿ ಮುಖ್ಯವಾಗಿದೆ, ಜಿಲ್ಲೆಯ ಭಾಗದ ಜನತೆ ಬದಲಾವಣೆ ಹೊಂದಬೇಕಿದೆ. ಸಹೋದರ- ಸಹೋದರಿಯರು ಶಿಕ್ಷಣದೆಡೆಗೆ ಹೆಜ್ಜೆ ಹಾಕಬೇಕಿದೆ ಹೀಗಾಗಿ ಕಾಂಗ್ರೆಸ್ ಗೆಲ್ಲಿಸಿ, ಚಿಕ್ಕೋಡಿ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿಯಾಗಿರುವ ನಿಮ್ಮ ಮನೆ-ಮಗಳನ್ನು ಕೈ ಹಿಡಿದು ನಡೆಸಿ ಎಂದು ಪ್ರಿಯಂಕಾ ಜಾರಕಿಹೊಳಿ ಅವರು ಮನವಿ ಮಾಡಿಕೊಂಡರು.

ಕಾಂಗ್ರೆಸ್ ಎಲ್ಲಾ ಸಮುದಾಯದ ಹಿತವನ್ನು ಬಯಸಿದೆ, ಎಲ್ಲರೂ ನೆಮ್ಮದಿಯಿಂದ ಜೀವನ ಸಾಗಿಸಬೇಕಿದೆ. ಕಾಂಗ್ರೆಸ್ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿ ನುಡಿದಂತೆ ನಡೆಯುವ ಮೂಲಕ ಜನರ ಮನಸ್ಸು ಗೆದ್ದಿದೆ. ಹೀಗಾಗಿ ಮುಂಬರುವ ಚಿಕ್ಕೋಡಿ ಲೋಕಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಮತ ನೀಡಿ ನಿಮ್ಮ ಮಗಳನ್ನು ಗೆಲ್ಲಿಸಿ ಆಶೀರ್ವದಿಸಬೇಕು ಎಂದು ಮನವಿ ಮಾಡಿದರು.

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರು, ಮುಖಂಡರು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

# ಸಮಾಜಮುಖಿ ಕಾರ್ಯಗಳಿಂದ ಮನುಷ್ಯ ದೂರವಾಗುತ್ತಿದ್ದಾನೆ: ಕಲಾವಿದ ಬಾಬುರಾವ ನಡೋಣಿ

ಬೆಳಗಾವಿ: ಇಂದಿನ ದಿನಗಳಲ್ಲಿ ಮನುಷ್ಯನು ತಾನು, ತನ್ನ ಕುಟುಂಬ ಹೀಗೆ ತನ್ನ ಸುತ್ತಲೇ ತಿರಗುತ್ತಾನೆ. ತುಂಬ ಸ್ವಾರ್ಥಿಯಾಗುತ್ತಿದ್ದು ಸಮಾಜಮುಖಿ ಕಾರ್ಯಗಳಿಂದ ದೂರವಾಗುತ್ತಿದ್ದಾನೆ. ಆದರೆ ಕಲಾ ಮಾಲಾ ಪೌಂಡೇಶನ್ ಆರ್ಟ ಮತ್ತು ಕಲ್ಚರ್ ಸಂಘಟನೆಯವರು ರಾಜ್ಯದ ದೃಶ್ಯಕಲಾ ವಿದ್ಯಾರ್ಥಿಗಳ ಕಲಾ ಪ್ರದರ್ಶನ ಹಮ್ಮಿಕೊಳ್ಳುವುದು ಮತ್ತು ಶಿಷ್ಯವೇತವನ್ನು ನೀಡುವುದರ ಮೂಲಕ ಸಾಮಾಜಿಕ ಕಳಕಳಿಯನ್ನು ಮೆರೆದಿದ್ದಾರೆ ಎಂದು ಖ್ಯಾತ ಚಿತ್ರಕಲಾವಿದ ರಾಯಬಾಗದ ಬಾಬುರಾವ ನಡೋಣಿಯವರು ಇಂದಿಲ್ಲಿ ಹೇಳಿದರು.

ತಿಲಕವಾಡಿ ಹೆರವಾಡ್ಕರ ಸ್ಕೂಲ ಬಳಿಯಿರುವ ಕಲಾಮಹರ್ಷಿ ಶ್ರೀ ಬಿ. ಕೆ. ಕುಲಕರ್ಣಿ ಆರ್ಟ ಗ್ಯಾಲರಿಯಲ್ಲಿ ಕಲಾ ಮಾಲಾ ಫೌಂಡೇಶನ್ ಆರ್ಟ ಮತ್ತು ಕಲ್ಚರ್ ವತಿಯಿಂದ ರಾಜ್ಯದ ದೃಶ್ಯಕಲಾ




ವಿದ್ಯಾರ್ಥಿಗಳ ಕಲಾ ಪ್ರದರ್ಶನ ಹಾಗೂ ಶಿಷ್ಯವೇತನ ವಿತರಣೆ ಸಮಾರಂಭವನ್ನು ಉದ್ಘಾಟಿಸಿದ ನಡೋಣಿಯವರು ಮೇಲಿನಂತೆ ಹೇಳಿದರು. ಮುಂದೆ ಮಾತನಾಡುತ್ತ ಅವರು ಸರ್ಕಾರ ಮಾಡದ ಕೆಲಸವನ್ನು ಕಲಾ ಮಾಲಾ ಪೌಂಡೇಶನ್ ಆರ್ಟ ಮತ್ತು ಕಲ್ಚರ್ ಸಂಸ್ಥೆಯವರು ಮಾಡುತ್ತಿದ್ದಾರೆ ಎಂದು ಹೇಳಿದರು.

ಅತಿಥಿಗಳಾಗಿ ಆಗಮಿಸಿದ್ದ ವ್ಯವಸ್ಥಾಪಕ ನಿರ್ದೇಶಕ ದಖನಿ ಡೈರಿಜದ ಗೋಪಿಕೃಷ್ಣ ಸೋಮಶೇಖರ ತೇರದಾಳ ಅವರು ಮಾತನಾಡುತ್ತ, ಕಲೆಯನ್ನುವುದು ಹೆಚ್ಚಾಗಿ ಬಡವರಲ್ಲಿ ಹುಟ್ಟುತ್ತದೆ. ಆ ಕಲಾವಿದರನ್ನ ಗುರುತಿಸಿ ಪ್ರೋತ್ಸಾಹಿಸುತ್ತಿರುವ ದೊಡಮನಿ ಕುಟುಂಬದ ಕಾರ್ಯ ನಿಜಕ್ಕೂ ಶ್ಲಾಘನೀಯವಾದುದು ಎಂದು ಹೇಳಿದರು.

ಅತಿಥಿಯಾಗಿ ಆಗಮಿಸಿದ್ದ ಇನ್ನೋರ್ವ ಕಲಾವಿದ ದಿಲೀಪಕುಮಾರ ಕಾಳೆಯವರು ಈ ಒಂದು ಕಾರ್ಯಕ್ರಮದಿಂದ ಗಣೇಶ ದೊಡಮನಿಯವರು ತಯಿಯ ಮೇಲಿನ ಪ್ರೀತಿ ಮತ್ತು ಕಲಾವಿದರ ಮೇಲಿನ ಗೌರವ ಎರಡನ್ನೂ ವ್ಯಕ್ತ ಪಡಿಸುತ್ತಿದ್ದಾರೆ ಇದೊಂದು ಅಪರೂಪದ ಕಾರ್ಯಕ್ರಮ ಎಂದು ಹೇಳಿದರು.

ಕರ್ನಾಟಕ ಲಲಿತಕಲಾ ಅಕಾಡಮಿಯ ಸದಸ್ಯರಾದ ಶ್ರೀಮತಿ ಆಶಾರಾಣಿ ನಡೋನಿಯವರನ್ನು ಸನ್ಮಾನಿಸಿ ಗೌರವಿಸಲಾಯಿತು.

2024 ನೇ ಸಾಲಿನ ಶಿಷ್ಯವೇತನವನ್ನು ಪಡೆದ ದೃಶ್ಯಕಲಾ ವಿದ್ಯಾರ್ಥಿಗಳಾದ ಬೆಂಗಳೂರಿನ ಚೇತನ ಕುಮಾರ, ದಾವಣಗೆರೆಯ ಸರ್ಬೀನ ತಾಜ ಕೆ.ಎಸ್. ಮಂಗಳೂರಿನ ಪೃಥ್ವಿ ರಾಜ್, ಬೆಂಗಳೂರಿನ ರಾಜೇಶ ಆರ್, ಬೆಂಗಳೂರಿನ ಸಂಧ್ಯಾ ಬಿ.ವಿ. ಇವರರನ್ನು ನೆನಪಿನ ಕಾಣಿಕೆ, ಪ್ರಮಾಣ ಪತ್ರ ಹಾಗೂ ನಗದು ಬಹುಮಾನ ನೀಡಿ ಗೌರವಿಸಲಾಯಿತು. ಕರ್ನಾಟಕ ಸಂಗೀತ ಕಲಾವಿದರಾದ ಶ್ರೀಮತಿ ಪದ್ಮ ಸತ್ಯನಾರಾಯಣ ಹಾಗೂ ಸಂಗಡಿಗರಿಂದ ಸಂಗೀತ ಕಾರ್ಯಕ್ರಮ ಜರುಗಿತು.

ಪಿ. ಎಚ್. ದೊಡಮನಿ, ಸೋಮಶೇಖರ ತೇರದಾಳ ಅತಿಥಿಗಳಾಗಿ ಆಗಮಿಸಿದ್ದರು. ಚಂದ್ರು ಯಡ್ರಾವಿ, ಗುರುಸಿದ್ದಪ್ಪಾ ಮಲ್ಲಾಪುರ, ಡಾ. ರಾಮಕೃಷ್ಣ ಮರಾಠೆ, ಶಿರೀಷ ಜೋಶಿ, ವಿಶ್ವನಾಥ ಗುಗ್ಗರಿ ಮುಂತಾದವರು ಉಪಸ್ಥಿತರಿದ್ದರು. ಶಂಕರ ಕದಕುಂಟ್ಲ ನಿರೂಪಿಸಿದರು.

## ಪಂಜಾಬ್: 55 ವರ್ಷದ ಮಹಿಳೆ ಮೇಲೆ ಹಲ್ಲೆ, ಅರೆಬೆತ್ತಲೆ ಮೆರವಣಿಗೆ



ತರ್ನ್ ತರಣ್: ವಧುವಿನ ಪೋಷಕರ ಇಚ್ಛೆಗೆ ವಿರುದ್ಧವಾಗಿ ಮದುವೆಯಾಗಿದ್ದಕ್ಕೆ 55 ವರ್ಷದ ವರನ ತಾಯಿಗೆ ಬೀಗರು ಹಲ್ಲೆ ನಡೆಸಿ, ಅರೆಬೆತ್ತಲೆ ಮೆರವಣಿಗೆ ಮಾಡಿರುವ ಪಂಜಾಬಿನ ತರ್ನ್ ತರನ್ ನಲ್ಲಿ ನಡೆದಿರುವುದಾಗಿ ಪೊಲೀಸರು ಶನಿವಾರ ತಿಳಿಸಿದ್ದಾರೆ.

ಸಂತ್ರಸ್ತೆಯನ್ನು ಅರೆಬೆತ್ತಲೆ ಮೆರವಣಿಗೆ ಮಾಡುತ್ತಿರುವ ವಿಡಿಯೋ ಶುಕ್ರವಾರ ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದೆ. ಮಾರ್ಚ್ 31 ರಂದು ಸಂತ್ರಸ್ತೆಯ ಮಗ ಯುವತಿಯೊಂದಿಗೆ ಓಡಿಹೋಗಿ ಆಕೆಯ ಕುಟುಂಬದ ಇಚ್ಛೆಗೆ ವಿರುದ್ಧವಾಗಿ ಅವಳನ್ನು ಮದುವೆಯಾದ ಕೆಲವು ದಿನಗಳ ನಂತರ ಈ ಘಟನೆ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಸಂತ್ರಸ್ತೆ ನೀಡಿರುವ ದೂರಿನ ಪ್ರಕಾರ, ಆಕೆ ತನ್ನ ಮನೆಯಲ್ಲಿ ಒಬ್ಬಳೇ ಇದ್ದಾಗ ಆಕೆಯ ಮಗನ ಮಾವನ ಮನೆಯವರು ಆಕೆಯ ಮೇಲೆ ಹಲ್ಲೆ ನಡೆಸಿ ಬಟ್ಟೆ ಹರಿದು ಹಾಕಿದ್ದಾರೆ. ನಂತರ ಅರೆಬೆತ್ತಲೆ ಸ್ಥಿತಿಯಲ್ಲಿ ಗ್ರಾಮದಲ್ಲಿ ಮೆರವಣಿಗೆ ಮಾಡಿದರು ಎಂದು ಸಂತ್ರಸ್ತೆ ಆರೋಪಿಸಿದ್ದಾರೆ.

BELAGAVI VARADI KANNADA DAILY MORNING : Editor, Printer, Publisher & Owned By : Satish Basavani Gudagenatti. Basavani House No.53, Ashray Colony Sarathi Nagar, Tv Center - 590019, TQ & DIST Belagavi, Karnataka.
Printed At : LAXMI PRINTERS, No.627. Auto Nagar - 590016.TQ & DIST Belagavi, Karnataka Mob : 9900332089